ಸಂಪುಟ : 10 ಸಂಚಿಕೆ: 72 ಪುಟ : 4+2 ಬೆಲೆ: 3.00 ಶುಕ್ರವಾರ ಎಪ್ರಿಲ್ 18 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 72 Pages : 4+2 Price : 3.00 Friday April 18 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಿರೀಕ್ಷೆ ಹೆಚ್ಚಿಸಿದ 'ಜನತಾ ದರ್ಶನ'

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**



ಪಟ್ಟಣದ ಎಸ್‌ಜೆಜೆಎಂ ಪದವಿಪೂರ್ವ ಮಾಹಾ ವಿದ್ಯಾಲಯದಲ್ಲಿ ಎಪ್ರಿಲ್ 19ರಂದು ಜಿಲ್ಲಾ ಮಟ್ಟದ ಜನತಾ ದರ್ಶನ ಹಮ್ಮಿಕೊಂಡಿದ್ದು, ಸಾರ್ವಜನಿಕರಲ್ಲಿ ನಿರೀಕ್ಷೆಗಳನ್ನು ಹೆಚ್ಚಿಸಿದೆ.

ಪಟ್ಟಣದಲ್ಲಿ ಮೊಟ್ಟ ಮೊದಲ ಬಾರಿಗೆ ಗದಗ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರ ವಿಶೇಷ ಕಾಳಜಿಯಿಂದ ಮುಳಗುಂದ ಪಟ್ಟಣದಲ್ಲಿ ಜಿಲ್ಲಾ ಮಟ್ಟದ ಜನತಾ ದರ್ಶನ ಹಮ್ಮಿಕೊಳ್ಳಲಾಗಿದೆ. ಜಿಲ್ಲಾಡಳಿತದ ಎಲ್ಲಾ ಇಲಾಖೆಗಳು ಭಾಗವಹಿಸುವುದರಿಂದ ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸೂಕ್ತ ವೇದಿಕೆ ನಿರ್ಮಾಣಗೊಂಡಿದ್ದು, ಸಾರ್ವಜನಿಕರು ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು.

ಪಟ್ಟಣದ ಶಾಶ್ವತ ಕುಡಿಯುವ ನೀರು, ಸಮುದಾಯ ಆರೋಗ್ಯ ಕೇಂದ್ರ, ಕ್ರೀಡಾಪಟುಗಳಿಗೆ ಕ್ರೀಡಾಂಗಣ, ಈಜುಕೊಳ, ನಾಡ ಕಛೇರಿ, ವಿದ್ಯುತ್ ಗ್ರಿಡ್ ಸೇರಿದಂತೆ ಹಲವಾರು ಸಮಸ್ಯೆಗಳಿಗೆ ಪರಿಹಾರದ ನಿರೀಕ್ಷೆಯಲ್ಲಿದ್ದಾರೆ.

ಪಟ್ಟಣದ ಹೃದಯ ಭಾಗದಲ್ಲಿರುವ ಅಬ್ಬಗೇರಿ ಕೆರೆಯಲ್ಲಿ ದೋಣಿ ವಿಹಾರಕ್ಕೆ ಚಾಲನೆ, ಇಂದಿರಾ ಕ್ಯಾಂಟೀನ್ ಉದ್ಘಾಟನೆ, ಪೌರ ಕಾರ್ಮಿಕರ ವಿಶ್ರಾಂತಿ ಗೃಹ ಹಾಗೂ ವಿವಿಧ ಮಳಿಗೆಗಳ ಉದ್ಘಾಟನೆಯನ್ನು ಇದೇ ಸಂದರ್ಭದಲ್ಲಿ ಸಚಿವರು ನೆರವೇರಿಸಲಿದ್ದಾರೆ.

### ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ

# 'ಸಮಾನತೆ ರಥಯಾತ್ರೆ' ನಾಳೆಯಿಂದ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜದಲ್ಲಿ ಸಮಾನತೆ ಸೃಷ್ಟಿಸಲು ಏ.19ರಿಂದ 15 ದಿನಗಳ ಕಾಲ 'ಸಮಾನತೆ ರಥಯಾತ್ರೆ' ನಡೆಸಲಾಗುವುದು. ಬಸವೇಶ್ವರ ಮೂರ್ತಿಗೆ ಮಾಲಾರ್ಪಣೆ ಮಾಡುವ ಮೂಲಕ ಏ.19ರ ಮಧ್ಯಾಹ್ನ 3ಕ್ಕೆ ಯಾತ್ರೆಗೆ ಚಾಲನೆ ನೀಡಲಾಗುವುದು. ಗ್ರಾಮಗಳಲ್ಲಿಯೂ ಈ ರಥಯಾತ್ರೆ ಜರುಗಲಿದೆ. ಪ್ರತಿಯೊಂದು ದಿನ ವಾಲ್ಮೀಕಿ ರಾಮಾಯಣ, ಭಜನೆ, ಡಾ. ಅಂಬೇಡ್ಕರರ ಸಿದ್ಧಾಂತಗಳ ಚರ್ಚೆ ಸೇರಿದಂತೆ ಹಲವು ವಿಷಯಗಳು ಚರ್ಚೆ ನಡೆಸಲಾಗುವುದು. ಪ್ರತಿ ದಿನ ಸಂಜೆ ಬುತ್ತಿ ಜಾತ್ರೆ ಮಾಡಲಾಗುವುದು ಎಂದು ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಮಾನತೆ ಮಂದಿರ ನಿರ್ಮಾಣಕ್ಕೆ ಕುರ್ತಕೋಟಿ ಗ್ರಾಮದಲ್ಲಿ ಸ್ಥಳೀಯರು ಎರಡು ಎಕರೆ ಜಮೀನು ದಾನವಾಗಿ ಕೊಟ್ಟಿದ್ದಾರೆ. ಈ ಸಂಕಲ್ಪ ನೆರವೇರಿಸಲು ಗದಗ, ಬೆಂಗಳೂರು ಸೇರಿದಂತೆ ವಿವಿಧ ಭಾಗಗಳ ಹಲವಾರು ದಾನಿಗಳು ಸಹಕಾರ ನೀಡಲು ಮುಂದೆ ಬಂದಿದ್ದಾರೆ. ಮುಂದಿನ ಎರಡು ವರ್ಷಗಳಲ್ಲಿ ಮಂದಿರ ನಿರ್ಮಾಣ ಕಾರ್ಯ ಪೂರ್ಣಗೊಳಿಸಲಾಗುವುದು



ಎಂದರು. ಸಮಾನತೆ ರಥಯಾತ್ರೆಯು ಯಾವುದೇ ರಾಜಕೀಯಕ್ಕೆ ಸಂಬಂಧಿಸಿದ್ದಲ್ಲ. ರಾಜಕೀಯ ಹೊರತುಪಡಿಸಿ ಈ ರಥಯಾತ್ರೆ ನಡೆಸಲಾಗುವುದು. ರಥಯಾತ್ರೆ ಜತೆಗೆ ಬುತ್ತಿ ಕಾರ್ಯಕ್ರಮ ನಡೆಸಲಾಗುತ್ತಿದೆ. ವಿವಿಧ ಗ್ರಾಮದಿಂದ ಬುತ್ತಿಯನ್ನು ಸಮರ್ಪಿಸಲು ಸ್ವಯಂ ಪ್ರೇರಿತರಾಗಿ ಮುಂದೆ ಬರುತ್ತಿದ್ದಾರೆ. ಈ ಯಾತ್ರೆಗೆ ಪಕ್ಷಾತೀತ, ಧರ್ಮಾತೀತವಾಗಿ ಎಲ್ಲರಿಗೂ ಆಹ್ವಾನ ಇದೆ ಎಂದು ಅನಿಲ ಮೆಣಸಿನಕಾಯಿ ತಿಳಿಸಿದರು.


ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಸಿದ್ದು ಪಲ್ಲೇದ ಮಾತನಾಡಿ, ಅನಿಲ ಮೆಣಸಿನಕಾಯಿ ನೇತೃತ್ವದಲ್ಲಿ ಹಲವು ಕಾರ್ಯಕ್ರಮಗಳು ಜರುಗಿವೆ. ಕಳೆದ ವರ್ಷ ಅಂಬೇಡ್ಕರ್ ಜಯಂತಿ ದಿನದಂದೇ ಸಮಾನತೆ ಮಂದಿರ ನಿರ್ಮಾಣಕ್ಕೆ ಘೋಷಣೆ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಅಖಿಲ ಭಾರತ ಸಮಾನತೆ ಪ್ರತಿಷ್ಠಾನದ ವತಿಯಿಂದ ಸಮಾನತೆ ರಥಯಾತ್ರೆ 15 ದಿನಗಳ ಕಾಲ ಜಿಲ್ಲೆಯಾದ್ಯಂತ ನಡೆಯಲಿದೆ. ಕನಕದಾಸ, ಶಿಶುನಾಳ ಷರೀಫ ಸೇರಿದಂತೆ ಹಲವು ದಾರ್ಶನಿಕರ, ಮಹನೀಯರ ಪ್ರತಿಮೆಗಳ ಮೆರವಣಿಗೆ ನಡೆಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಪರಮೇಶ ಲಮಾಣಿ, ಸಿದ್ದು ಪಲ್ಲೇದ, ಮಂಜುನಾಥ ಮ್ಯಾಗೇರಿ, ವಸಂತ ಪಡಗದ, ಶರಣಪ್ಪ ಚಿಂಚಲಿ ಮುಂತಾದವರಿದ್ದರು.

> ಸಮಾನತೆ ರಥಯಾತ್ರೆಯಲ್ಲಿ ಬುದ್ಧ, ಬಸವ, ಅಂಬೇಡ್ಕರ್, ದಾಸರು, ಶಿಶುನಾಳ ಶರೀಫರು ಸೇರಿದಂತೆ ಹಲವರ ಪ್ರತಿಮೆಗಳ ಮೆರವಣಿಗೆ ಮಾಡಲಾಗುವುದು. ಜಯಂತಿ ಮಾಡುವ ಮೂಲಕ ಕೇವಲ ಅವರ ಜಯಂತಿಯ ದಿನವಷ್ಟೇ ಮಹನೀಯರನ್ನು ಸ್ಮರಣೆ ಮಾಡಲಾಗುತ್ತದೆ. ಆದರೆ, ಅವರ ಸ್ಮರಣೆ ನಿತ್ಯ ನಿರಂತರ ಆಗಬೇಕು. ಈ ಮಂದಿರವು ಕೇವಲ ಪೂಜಾ ಸ್ಥಾನವಾಗಿ ಮಾಡುತ್ತಿಲ್ಲ. ಇಲ್ಲಿ ಜ್ಞಾನವನ್ನು ಪಸರಿಸುವ ಕಾರ್ಯಕ್ಕೆ ನಾಂದಿ ಹಾಡಲಾಗುತ್ತಿದೆ. ಹಾಗಾಗಿ ಮಂದಿರ ನಿರ್ಮಾಣದ ಅನಿವಾರ್ಯತೆಯಿದೆ.
>
> **– ಅನಿಲ ಮೆಣಸಿನಕಾಯಿ.**
> ಬಿಜೆಪಿ ಮುಖಂಡರು.

## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

**■ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರು ಎಪ್ರಿಲ್ 18 ಮತ್ತು 19 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಈ ಕೆಳಗಿನಂತಿದೆ.

ಎಪ್ರಿಲ್ 18 ರಂದು ಬೆಳಿಗ್ಗೆ 6.30 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮೂಲಕ ಹೊರಟು ಗದುಗಿಗೆ ಬೆ. 7.30 ಗಂಟೆಗೆ ಆಗಮಿಸುವರು. ಬೆಳಿಗ್ಗೆ 9.30 ಗದಗ ಜಿಲ್ಲೆಯ ಕುರ್ತಕೋಟಿ ಗ್ರಾಮದ ರೇಣುಕಾ ನಗರದಲ್ಲಿ ಪ್ರೊ. ಕೀರ್ತಿನಾಥ ಕುರ್ತಕೋಟಿ ಸಾಂಸ್ಕೃತಿಕ ಭವನದ ಭೂಮಿ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆಳಿಗ್ಗೆ 10.30 ಗಂಟೆಗೆ ಕುರ್ತಕೋಟಿಯಲ್ಲಿ ನಡೆಯಲಿರುವ ಗದಗ ತಾಲೂಕು ಸಾಹಿತ್ಯ ಸಮ್ಮೇಳನದಲ್ಲಿ ಪಾಲ್ಗೊಳ್ಳುವರು. ಸಂಜೆ 5.30 ಗಂಟೆಗೆ ಗದಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳು, ಸಿ.ಇ.ಓ ಮತ್ತು ಡಿ.ಡಿ.ಪಿ.ಐ ಗದಗ ಅವರೊಂದಿಗೆ ಶಾಲಾ ಶೌಚಾಲಯದ ಕುರಿತು ಸಭೆ ಜರುಗಿಸುವರು. ಮತ್ತು ವಾಸ್ತವ್ಯ ಮಾಡುವರು.

ಎಪ್ರಿಲ್ 19 ರಂದು ಬೆಳಿಗ್ಗೆ 10 ಗಂಟೆಯಿಂದ 11 ರವರೆಗೆ ಮುಳಗುಂದ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ವಿವಿಧ ಕಾಮಗಾರಿಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಬೆಳಿಗ್ಗೆ 11 ಗಂಟೆಗೆ ಮುಳಗುಂದದಲ್ಲಿ ಜನತಾ ದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

### ಪತ್ರಿಕಾಗೋಷ್ಠಿಯಲ್ಲಿ ಅಸಮಾಧಾನ ವ್ಯಕ್ತಪಡಿಸಿದ ಸಾಹಿತಿ ಬಸವರಾಜ ಸೂಳಿಭಾವಿ

# ಕಾಂತರಾಜು ವರದಿ ತಿರಸ್ಕಾರಕ್ಕೆ ಹುನ್ನಾರ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಾತಿ ವ್ಯವಸ್ಥೆಯೇ ಶ್ರೇಷ್ಠ ಮತ್ತು ಕನಿಷ್ಠತೆಯನ್ನು ಹುಟ್ಟು ಹಾಕಿದೆ. ಈ ಬಗ್ಗೆ ದೇಶದಲ್ಲಿ ಸರಿಯಾದ ಅಧ್ಯಯನ ಆಗಬೇಕು. 1931ರಲ್ಲಿ ಜಾತಿ ಗಣತಿ ನಡೆದಿದ್ದು, ಅಂದಿನಿಂದ ಇಂದಿನವರೆಗೂ ನಿಖರವಾದ ಜಾತಿ ಗಣತಿ ನಡೆದಿಲ್ಲ. ಹಿಗಿದ್ದರೂ ಜಾತಿ ಗಣತಿ ಆಧಾರದ ಮೇಲೆ ಹಲವು ತಿರ್ಮಾನ ಆಗುತ್ತಿರುವುದು ಸರಿಯಾದ ಕ್ರಮವಲ್ಲ. ಬಲಾಢ್ಯ ಜಾತಿಗಳು ಜನಸಂಖ್ಯೆಯಲ್ಲಿ ಕಡಿಮೆ ಇದ್ದರೂ, ರಾಜಕೀಯ ಅಧಿಕಾರ ಮುಂದಿಟ್ಟು ಕೆಳಜಾತಿಯನ್ನು ನಿಯಂತ್ರಿಸುವ ಕೆಲಸ ಮಾಡುತ್ತಿವೆ ಎಂದು ಸಾಹಿತಿ ಬಸವರಾಜ ಸೂಳಿಭಾವಿ ಹೇಳಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಾಂತರಾಜು ವರದಿ ಇನ್ನೂ ಸಂಪೂರ್ಣವಾಗಿ ಬಿಡುಗಡೆ ಆಗದಿದ್ದರೂ ಅವೈಜ್ಞಾನಿಕ ಎಂದು ಹೇಳುವುದು ಸರಿಯಲ್ಲ. ರಾಜ್ಯದ ಮಠಾಧೀಶರು ಸೇರಿದಂತೆ ಹಲವರು ತಮ್ಮ ಸಮುದಾಯವನ್ನು



ಉಳಿಸಿಕೊಳ್ಳಲು ಈ ವರದಿಯನ್ನು ನಿರಾಕರಿಸುತ್ತಿವೆ. ಜೊತೆಗೆ, ತಮ್ಮ ಅಧಿಕಾರ ಕಳೆದುಕೊಳ್ಳುತ್ತೇವೆ ಎನ್ನುವ ಭೀತಿಯಲ್ಲಿದೆ. ಕಾಂತರಾಜು ವರದಿ ಕೇವಲ ಜಾತಿ ಜನಗಣತಿ ಅಲ್ಲ. ಸಾಮಾಜಿಕ ಸ್ಥಿತಿಗತಿಯೂ ಅದರಲ್ಲಿ ಅಡಗಿದೆ. ಬಿಜೆಪಿ ಹಾಗೂ ಕಾಂಗ್ರೆಸ್‌ನಲ್ಲಿರುವ ಮೇಲ್ಜಾತಿಯ ನಾಯಕರು ವಿರೋಧ ಮಾಡುತ್ತಿರುವುದು ಸಮಂಜಸವಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಹಾವನೂರ ವರದಿ, ಚಿನ್ನಪ್ಪರೆಡ್ಡಿ ವರದಿ ಸೇರಿದಂತೆ ಹಲವಾರು ವರದಿಗಳನ್ನು ಮೇಲ್ಜಾತಿಯವರು ಒಪ್ಪಿಕೊಂಡಿಲ್ಲ. ಅದೇ ರೀತಿ ಕಾಂತರಾಜು ವರದಿಯನ್ನು ತಿರಸ್ಕಾರ ಮಾಡುವ ಹುನ್ನಾರ ನಡೆದಿದ್ದು, ಆರ್ಥಿಕವಾಗಿ ಬಲಾಢ್ಯವಾಗಿರುವ ಲಿಂಗಾಯತರು ಹಾಗೂ ಒಕ್ಕಲಿಗರು ಈ ವರದಿಯನ್ನು ಒಪ್ಪಿಕೊಳ್ಳುತ್ತಿಲ್ಲ. ಸಿಎಂ ಸಿದ್ದರಾಮಯ್ಯ ಮೇಲ್ಜಾತಿಯವರ ರಾಜಕೀಯ ಒತ್ತಡಕ್ಕೆ ಮಣಿಯದೇ ವರದಿಯನ್ನು ಅನುಷ್ಠಾನಗೋಳಿಸಬೇಕು. ಈ ವರದಿ ಜಾರಿಯಾಗುವುದರಿಂದ ಹಿಂದುಳಿದ ವರ್ಗಗಳ ಏಳಿಗೆಗೆ ಸಹಾಯವಾಗುತ್ತದೆ. ವರದಿಯಲ್ಲಿ ದೋಷ ಕಂಡುಬಂದರೆ ಅಧ್ಯಯನ ಮಾಡಲಿ ಎಂದು ಸಲಹೆ ನೀಡಿದರು.

ಈ ವೇಳೆ ಮುಖಂಡರಾದ ಬಾಲರಾಜ ಅರಬರ, ಬಸವರಾಜ ಪೂಜಾರ, ಶರೀಫ್ ಬಿಳೆಯಲಿ, ಆನಂದ ಸಿಂಗಾಡಿ, ಪರಸುರಾಮ ಕಾಳೆ, ಅನಿಲ ಕಾಳೆ, ಮುತ್ತು ಬಿಳೆಯಲಿ ಉಪಸ್ಥಿತರಿದ್ದರು.

## ಆಟೋ ರಿಕ್ಷಾಗೆ ಸರ್ಕಾರಿ ಬಸ್ ಡಿಕ್ಕಿ: 6 ಮಂದಿ ಸಾವು!

**■ವಿಜಯಸಾಕ್ಷಿ ಸುದ್ದಿ, ಗಾಂಧಿನಗರ**

ಗುಜರಾತ್‌ನ ಪಠಾಣ್‌ನಲ್ಲಿ ಸಂಭವಿಸಿದ ಭೀಕರ ಅಪಘಾತದಲ್ಲಿ ಆರು ಮಂದಿ ಸಾವನ್ನಪ್ಪಿರುವ ಘಟನೆ ಜರುಗಿದೆ. ಸರ್ಕಾರಿ ಬಸ್ ಹಾಗೂ ಆಟೋ ರಿಕ್ಷಾ ನಡುವೆ ಡಿಕ್ಕಿ ಸಂಭವಿಸಿ ಈ ದುರಂತ ಸಂಭವಿಸಿದೆ. ರಾಜ್ಯ ಸಾರಿಗೆ ಬಸ್ ಹಿಮ್ಮತ್ ನಗರದಿಂದ ಕಚ್ ಕಡೆಗೆ ಹೋಗುತ್ತಿದ್ದ ವೇಳೆ ವಿರುದ್ಧ ದಿಕ್ಕಿನಿಂದ ಬರುತ್ತಿದ್ದ ಆಟೋ ರಿಕ್ಷಾಗೆ ಡಿಕ್ಕಿಯಾಗಿದೆ.

## ಸಿಲಿಂಡರ್ ದರ ಏರಿಕೆ ಖಂಡಿಸಿ ಕಾಂಗ್ರೆಸ್ ಪ್ರತಿಭಟನೆ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕೇಂದ್ರ ಸರ್ಕಾರದಿಂದ ಗ್ಯಾಸ್ ಬೆಲೆ ಹಾಗೂ ಅಗತ್ಯ ವಸ್ತುಗಳ ಬೆಲೆ ಏರಿಕೆ ಬಗ್ಗೆ ಆಕ್ರೋಶ ವ್ಯಕ್ತಪಡಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಫ್ರೀಡಂ ಪಾರ್ಕ್‌ನಲ್ಲಿ ನೆರೆದಿದ್ದ ಸಾವಿರಾರು ಕಾರ್ಯಕರ್ತರು ಬಿಜೆಪಿ ವಿರುದ್ಧ ಘೋಷಣೆಗಳನ್ನು ಕೂಗಿದರು. ಶಾಸಕರು, ಸಚಿವರು, ಮಹಿಳಾ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗಿಯಾದ್ದರು. ಬೆಂಗಳೂರು, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ ಭಾಗದಿಂದಲೂ ಕಾರ್ಯಕರ್ತರು ಆಗಮಿಸಿ ಶಕ್ತಿ ಪ್ರದರ್ಶನ ನಡೆಸಿದರು.

ಡಾ. ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ ಸಿಲಿಂಡರ್ ದರ 413 ರೂಪಾಯಿ ಇತ್ತು. ಈಗ 850 ರೂಪಾಯಿ ಮಾಡಿದ್ದಾರೆ ಎಂದು ಕಾಂಗ್ರೆಸ್ ನಾಯಕರು ಆಕ್ರೋಶ ವ್ಯಕ್ತಪಡಿಸಿದರು.

## ಅವಾಂತರ ಸೃಷ್ಟಿಸಿದ ಅಬ್ಬರದ ಮಳೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣ ಸೇರಿ ತಾಲೂಕಿನ ಬಹುತೇಕ ಕಡೆ ಬುಧವಾರ ಸಂಜೆ ಸುರಿದ ಅಬ್ಬರದ ಗಾಳಿ-ಮಳೆ ಅನೇಕ ಆವಾಂತರಗಳನ್ನು ಸೃಷ್ಟಿಸಿದೆ. ಪಟ್ಟಣದಲ್ಲಿ ಚರಂಡಿಗಳು ತುಂಬಿ ರಸ್ತೆ ಮೇಲೆಯೇ ಹರಿದು ಅನೇಕ ಕಡೆ ಸಂಚಾರ ಅಸ್ತವ್ಯಸ್ತಗೊಂಡಿತ್ತು.

ಸಮೀಪದ ಗೊಜನೂರ, ಅಕ್ಕಿಗುಂದ, ಬಟ್ಟೂರ ಸೇರಿದಂತೆ ತಾಲೂಕಿನ ಅನೇಕ ಗ್ರಾಮಗಳಲ್ಲಿ ಮುಂಗಾರು ಮಳೆ ಗುಡುಗು-ಸಿಡಿಲು ಆರ್ಭಟದೊಂದಿಗೆ ಜೋರಾಗಿ ಸುರಿದಿದ್ದು, ಅನೇಕ ಕಡೆಗಳಲ್ಲಿ ಮರಗಳು, ವಿದ್ಯುತ್ ಕಂಬಗಳು ಮುರಿದು ಬಿದ್ದು ಗ್ರಾಮದಲ್ಲಿ ವಿದ್ಯುತ್ ಸಂಪರ್ಕ ಕಡಿತವಾಗಿದೆ. ನೀರಾವರಿ ಶೇಂಗಾ ಬೆಳೆ ನೀರಿನಲ್ಲಿ ನಿಲ್ಲುವಂತಾಗಿದೆ. ಸಂಜೆ ಅಬ್ಬರಿಸಿದ ಮಳೆ-ಗಾಳಿಗೆ ಗೊಜನೂರ ಗ್ರಾಮದಲ್ಲಿ ರಮೇಶ ದನದಮನಿ ಅವರ ಮನೆ ಮುಂದೆ ಇದ್ದ ಸಿರಸಲ ಗಿಡ ಮುರಿದು ಲಕ್ಷ್ಮೇಶ್ವರ-ಗದಗ ರಸ್ತೆಯ ಮೇಲೆ ಬಿದ್ದಿದ್ದರಿಂದ ಒಂದು ಗಂಟೆಗೂ ಹೆಚ್ಚು ಕಾಲ ರಸ್ತೆ ಸಂಚಾರ ಬಂದ್ ಆಗಿತ್ತು.

ಗ್ರಾಮದಲ್ಲಿನ ಆರೇಳು ಮನೆಗಳ ತಗಡು ಗಾಳಿಗೆ ಹಾರಿಬಿದ್ದಿದ್ದು, ಗ್ರಾಮದ ನಿರ್ಮಲಾ ಬಾಗವಾಡ ಅವರ ಮೇಲೆ ಶೆಡ್ ಕುಸಿದು ಬಿದ್ದು ಗಾಯಗೊಂಡಿದ್ದಾರೆ. ಮಳೆ ಅನಾಹುತಕ್ಕೆ ಗೊಜನೂರ ಗ್ರಾಮದಲ್ಲಿ ರಾಮಣ್ಣ ಪ್ರಧಾನಿ ಎಂಬುವವರ ದನದ ಕೊಟ್ಟಿಗೆಯ ತಗಡುಗಳು ಹಾರಿಹೋಗಿವೆ. ಮಳೆಯ ಅನಾಹುತಕ್ಕೆ ಯಾವುದೇ ಪ್ರಾಣಹಾನಿ ಸಂಭವಿಸದಿರುವುದು ಸಮಾಧಾನ ನೀಡಿದೆ.

### ಮೇ. 30, 31ರಂದು ರಾಘವೇಂದ್ರ ಸ್ವಾಮಿ ಶಾಖಾ ಮಠ ಲೋಕಾರ್ಪಣೆ | ಡಿ.ಆರ್. ಪಾಟೀಲ ಮಾಹಿತಿ

# ಗದಗ ಭಾಗದಲ್ಲಿ ರಾಯರ ಶಾಖಾಮಠ

**■ವಿಜಯಸಾಕ್ಷಿ ಸುದ್ದಿ, ಗದಗ**

ಕಳಸಾಪೂರ ರಸ್ತೆಯಲ್ಲಿರುವ ನೂತನ ನಂಜನಗೂಡು ಮಂತ್ರಾಲಯ ರಾಘವೇಂದ್ರ ಸ್ವಾಮಿ ಶಾಖಾ ಮಠದ ಲೋಕಾರ್ಪಣೆ ಮೇ. 30 ಹಾಗೂ 31ರಂದು ಮಂತ್ರಾಲಯ ಮಠದ ಪಿಠಾಧಿಪತಿ 108 ಶ್ರೀ ಸುಭುದೇಂದ್ರ ತೀರ್ಥರ ನೇತೃತ್ವದಲ್ಲಿ ನಡೆಯಲಿದೆ ಎಂದು ಮಾಜಿ ಶಾಸಕ ಡಿ.ಆರ್. ಪಾಟೀಲ ತಿಳಿಸಿದರು.

ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಶ್ರೀ ರಾಘವೇಂದ್ರ ಸ್ವಾಮಿಗಳು ಕಲಿಯುಗದ ಕಾಮಧೇನು, ಕಲ್ಪವೃಕ್ಷ, ಭಕ್ತರ ಕೋರಿಕೆಗಳಿಗೆ ಬೃಂದಾವನದಲ್ಲಿ ಕುಳಿತು ಆಶೀರ್ವಾದ ಮಾಡುತ್ತಿರುವ ಶ್ರೀ ರಾಘವೇಂದ್ರ ಸ್ವಾಮಿಗಳ ಶಾಖಾ ಮಠ ಗದಗ ಭಾಗದಲ್ಲಿ ನಿರ್ಮಾಣವಾಗುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದರು.

ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಹವನ-ಹೋಮಾದಿಗಳು, ಪ್ರಾಣ ಪ್ರತಿಷ್ಠೆ ಕಾರ್ಯ, ಆಶೀರ್ವಚನ



ಸೇರಿದಂತೆ ಅನೇಕ ಧಾರ್ಮಿಕ ಸಭೆಗಳು ನಡೆಯಲಿವೆ. 2016ರಲ್ಲಿ ಪರಮಪೂಜ್ಯ ಶ್ರೀ ಸುಯತೀಂದ್ರ ತೀರ್ಥ ಶ್ರೀಗಳವರಿಂದ ಭೂಮಿ ಪೂಜೆ ನೆರವೇರಿಸಲಾಗಿತ್ತು. ಆರ್ಯವೈಶ್ಯ ಸಮಾಜದ ಶ್ರೀನಿವಾಸ್ ಶಿರಹಟ್ಟಿ ಕುಟುಂಬದವರು 9 ಪ್ಲಾಟ್‌ಗಳನ್ನು ಮಠಕ್ಕೆ ದಾನವಾಗಿ ನೀಡಿದ್ದು, ಇದರಲ್ಲಿ 5,600 ಚದರ ಅಡಿ ಜಾಗದಲ್ಲಿ ಸುಂದರ ಮಠದ ಕಟ್ಟಡ ನಿರ್ಮಾಣವಾಗುತ್ತಿದೆ ಎಂದರು.

> ಆರ್ಯವೈಶ್ಯ ಸಮಾಜದ ಹಿರಿಯರಾದ ಪ್ರಹ್ಲಾದ ಹೆಬಸೂರವರಿಂದ ಪ್ರಾರಂಭವಾದ ಮಂತ್ರಾಲಯ ಪಾದಯಾತ್ರೆ ಈಗ 34 ವರ್ಷಗಳನ್ನು ಪೂರೈಸಿದೆ. 35ನೇ ವರ್ಷ ಬರುವ ಮುನ್ನವೇ ಮಂತ್ರಾಲಯದ ಗುರು ಶ್ರೀ ರಾಘವೇಂದ್ರರನ್ನು ಈ ಮಠಕ್ಕೆ ಆಗಮಿಸುವಂತೆ ಮಾಡುತ್ತಿದ್ದಾರೆ. ಆರ್ಯವೈಶ್ಯ ಸಮಾಜದ ಭಕ್ತರು ಹಾಗೂ ಮಂತ್ರಾಲಯ ಪಾದಯಾತ್ರಿಕರು ಅಭಿನಂದನಾರ್ಹರು ಎಂದು ಡಿ.ಆರ್. ಪಾಟೀಲ ಹೆಮ್ಮೆಯಿಂದ ಹೇಳಿದರು.

ಅಂದಾಜು 1.50 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಈ ಕಟ್ಟಡಕ್ಕೆ ಮಂತ್ರಾಲಯ ಮಠದಿಂದ 50 ಲಕ್ಷ ರೂಪಾಯಿಗಳನ್ನು ನೀಡಿದ್ದು, ಸಚಿವ ಡಾ. ಎಚ್.ಕೆ. ಪಾಟೀಲ ತಮ್ಮ ಅನುದಾನದಲ್ಲಿ 10 ಲಕ್ಷ ರೂ ನೀಡಿದ್ದಾರೆ. ಜೊತೆಗೆ ಭಕ್ತರ ದಾನದ ಹಣದಿಂದ ಭವ್ಯವಾದ ಮಠ ನಿರ್ಮಾಣವಾಗಿದೆ. ಗರ್ಭಗುಡಿ, ಶ್ರೀಗಳಿಗೆ ವಿಶ್ರಾಂತಿ ವ್ಯವಸ್ಥೆ, ಪ್ರವಚನಕ್ಕೆ ಪ್ರಾಂಗಣ, ಅಡಿಗೆ ಮನೆ, ಉಗ್ರಾಣ, ರಾಯರಿಗೆ ಕಾಷ್ಟ ರಥ ಸೇರಿದಂತೆ ಪೂಜೆಗೆ ಅಗತ್ಯವಿರುವ ಸಾಮಗ್ರಿಗಳನ್ನು ಈಗಾಗಲೇ ಭಕ್ತರು ನೀಡಿದ್ದಾರೆ ಅಂತ ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ಘಟಕದ ಅಧ್ಯಕ್ಷ ಕೃಷ್ಣಗೌಡ ಪಾಟೀಲ್, ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಕಮಿಟಿ ಅಧ್ಯಕ್ಷ ಬಸವರಾಜ ಅಸೂಟಿ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಅಶೋಕ ಮಂದಾಲಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಕ್ಷುಲ್ಲಕ ವಿಚಾರಕ್ಕೆ ಕಿರಿಕ್: ದೊಣ್ಣೆಗಳಿಂದ ಬಡಿದಾಡಿಕೊಂಡ ಯುವಕರು!

■ **ವಿಜಯಸಾಕ್ಷಿ ಸುದ್ದಿ, ಗದಗ**

ಕ್ಷುಲ್ಲಕ ಕಾರಣಕ್ಕೆ ಎರಡು ಗುಂಪಿನ ಯುವಕರ ನಡುವೆ ಮಾರಾಮಾರಿ ನಡೆದು ದೊಣ್ಣೆಗಳಿಂದ ಬಡಿದಾಡಿಕೊಂಡಿರುವ ಘಟನೆ ಗದಗನ ಎಸ್.ಎಮ್ ಕೃಷ್ಣ ಕಾಲೋನಿಯಲ್ಲಿ ಜರುಗಿದೆ.

ಎಸ್ ಎಮ್ ಕೃಷ್ಣ ಕಾಲೋನಿಯ ಕೆಳಗಿನ ಓಣಿಯ ಯುವಕರ ಮೇಲೆ ಮ್ಯಾಲಿನ ಓಣಿಯ ಯುವಕರಿಂದ ಈ ಅಟ್ಯಾಕ್ ನಡೆದಿದೆ. ಹಲ್ಲೆಯಿಂದ ಹಲವು ಯುವಕರಿಗೆ ತಲೆ, ಕೈ, ಕಾಲು ಸೇರಿ ದೇಹದ ಹಲವು ಭಾಗಗಳಿಗೆ ಗಂಭೀರ ಗಾಯವಾಗಿದೆ ಎನ್ನಲಾಗಿದೆ. ಇನ್ನೂ ಹಲ್ಲೆಗೊಳಗಾದ ಓರ್ವ ಯುವಕನ ತಲೆ ರಕ್ತಸಿಕ್ತವಾಗಿದ್ದು, ಚಿಕಿತ್ಸೆಗಾಗಿ ಯುವಕನನ್ನು ಸ್ಥಳೀಯ ಆಸ್ಪತ್ರೆಗೆ ದಾಖಲು ಮಾಡಲಾಗಿದೆ.

ಯುವಕರ ಗಲಾಟೆಗೆ ಓಣಿಯ ಮಹಿಳೆಯರು, ಪೋಷಕರು ಚೀರಾಟ ಕೂಗಾಟ ನಡೆಸಿದ್ದಾರೆ. ಗಲಾಟೆ ನೋಡಿ ಸ್ಥಳೀಯರು ಭಯಭೀತರಾದರು. ಗಾಂಜಾ ಸೇವನೆ ಮಾಡಿ ರೌಡಿಸಂ ಮಾಡ್ತಿರೋ ಬಗ್ಗೆ ಸ್ಥಳೀಯರು ಮಾಹಿತಿ ನೀಡಿದ್ದು, ಬೆಟಗೇರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ಜರುಗಿದೆ.

## ಜಾತಿ ಸಮೀಕ್ಷೆ ಇನ್ನೂ ಓದಿಲ್ಲ: ಮಲ್ಲಿಕಾರ್ಜುನ ಖರ್ಗೆ

■ **ವಿಜಯಸಾಕ್ಷಿ ಸುದ್ದಿ, ಕಲಬುರ್ಗಿ**

ರಾಜ್ಯದ ಕಾಂಗ್ರೆಸ್ ನೇತೃತ್ವದ ಸರ್ಕಾರವು 'ಜಾತಿ ಸಮೀಕ್ಷೆ' ವರದಿಯನ್ನು ಸಂಪುಟದಲ್ಲಿ ಚರ್ಚಿಸಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಗುರುವಾರ ಹೇಳಿದ್ದಾರೆ.

ವರದಿಯ ಬಗ್ಗೆ ಪ್ರತಿಕ್ರಿಯಿಸಲು ನಿರಾಕರಿಸಿದ ಅವರು ತಾನು ಇನ್ನೂ ಅದನ್ನು ನೋಡಿಲ್ಲ ಎಂದು ಹೇಳಿದ್ದಾರೆ. ಜಾತಿ ಸಮೀಕ್ಷೆ ಇನ್ನೂ ಓದಿಲ್ಲ

"ಈ ವಿಚಾರ ರಾಜ್ಯ ಸರ್ಕಾರಕ್ಕೆ ಬಿಟ್ಟಿದ್ದು, ಪ್ರತಿಯೊಂದು ರಾಜ್ಯವೂ ತನ್ನದೇ ಆದ ಕೆಲಸವನ್ನು ಮಾಡುತ್ತದೆ.

ಇದನ್ನು ಕೇಂದ್ರ ಸರ್ಕಾರ ಮಾಡಿಲ್ಲ. ರಾಜ್ಯ ಸರ್ಕಾರವು ಸಂಪುಟದಲ್ಲಿ ಚರ್ಚಿಸಿ ನಿರ್ಧರಿಸುತ್ತದೆ. ಈ ವರದಿಯನ್ನು ನಾನು ನೋಡಿಲ್ಲ. ಈ ವಿಷಯವನ್ನು ರಾಜ್ಯ ಸರ್ಕಾರಕ್ಕೆ ಬಿಡಲಾಗಿದೆ" ಎಂದು ಖರ್ಗೆ ಕಲಬುರ್ಗಿಯಲ್ಲಿ ಸುದ್ದಿಗಾರರಿಗೆ ತಿಳಿಸಿದ್ದಾರೆ.

## ಸಾರಿಗೆ ಸಚಿವರ ಜೊತೆ ನಡೆದ ಸಭೆ ಸಕ್ಸಸ್: ಲಾರಿ ಮುಷ್ಕರ ವಾಪಸ್!



■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಡೀಸೆಲ್ ದರ ಮತ್ತು ಟೋಲ್ ಶುಲ್ಕ ಹೆಚ್ಚಳ ಪರಿಷ್ಕರಣೆ ಮಾಡುವಂತೆ ಆಗ್ರಹಿಸಿ ನಡೆಸುತ್ತಿದ್ದ ಲಾರಿ ಮುಷ್ಕರವನ್ನು ಕೊನೆಗೂ ವಾಪಸ್ ಪಡೆಯಲಾಗಿದೆ.

ಮೂರು ದಿನಗಳಿಂದ ನಡೆಯುತ್ತಿದ್ದ ಲಾರಿ ಮುಷ್ಕರದ ಬಗ್ಗೆ ಮಾಧ್ಯಮಗಳೊಂದಿಗೆ ಸಾರಿಗೆ ಸಚಿವ ರಾಮಲಿಂಗ ರೆಡ್ಡಿ ಮಾಹಿತಿ ನೀಡಿ, ಲಾರಿ ಮಾಲೀಕರು ಜೊತೆ ಸಭೆ ನಡೆಸಿದ್ದೇವೆ. ಆರು ಬೇಡಿಕೆಗಳನ್ನು ಇಟ್ಟಿದ್ದಾರೆ. ಮೊದಲು ಆಯುಕ್ತರ ಜೊತೆ ಸಭೆ ನಡೆಸಿದ್ದರು. ಆನ್‌ಲೈನ್‌ನಲ್ಲಿ ದಂಡ ಕಟ್ಟುವ ವ್ಯವಸ್ಥೆಯನ್ನು ಮಾಡಲಿದ್ದೇವೆ ಎಂದರು. ಒಟಿಎಸ್ ಮಾದರಿಯಲ್ಲಿ ದಂಡ ಪಾವತಿಗೆ ಅವಕಾಶ ಕಲ್ಪಿಸುವಂತೆ ಕೇಳಿದ್ದಾರೆ. ಅದನ್ನು ಸಿಎಂ ಗಮನಕ್ಕೆ ತರಲಿದ್ದೇವೆ ಹಾಗೂ ಟೋಲ್ ವಿಚಾರವನ್ನೂ ಸಿಎಂ ಗಮನಕ್ಕೆ ತರುತ್ತೇನೆ ಎಂದು ಹೇಳಿದರು.

ಲಾರಿ ಮಾಲೀಕರ ಸಂಘದ ಅಧ್ಯಕ್ಷ ಷಣ್ಮುಗಪ್ಪ ಪ್ರತಿಕ್ರಿಯಿಸಿ, ನಾಲ್ಕು ಪ್ರಮುಖ ಬೇಡಿಕೆ ಇತ್ತು. ಬಾರ್ಡರ್ ಚೆಕ್‌ಪೋಸ್ಟ್ ಸಮಸ್ಯೆಯನ್ನು 3 ತಿಂಗಳಲ್ಲಿ ಬಗೆಹರಿಸುವ ಭರವಸೆ ನೀಡಿದ್ದಾರೆ. ಡಿಸೇಲ್ ದರ 2023ರಲ್ಲಿ ಯದ್ವಾತದ್ವಾ ಏರಿಕೆ ಮಾಡಿದ್ದರು. ಇದನ್ನು ಇನ್ನೊಂದು ಬಾರಿ ಅಧ್ಯಯನ ಮಾಡುವುದಾಗಿ ಹೇಳಿದ್ದಾರೆ ಎಂದರು.

**ಗದಗ ತಾಲೂಕಾ 5ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷತೆ ವಹಿಸುತ್ತಿರುವ ನಿಮಿತ್ತ ಲೇಖನ**

## ಸಮರ್ಥ ಆಡಳಿತಗಾರ ಜಗನ್ನಾಥ ಜಮಾದಾರ

ಗದುಗಿನ ಪುಣ್ಯ ಭೂಮಿಕೆಯಲ್ಲಿ ಸಾಹಿತ್ಯ, ಸಾಂಸ್ಕೃತಿಕ, ಕಲೆ, ಸಂಗೀತ, ಶಿಕ್ಷಣ, ಸಹಕಾರ, ರಾಜನೀತಿ, ಕೃಷಿ, ಮುದ್ರಣ, ಲಲಿತ ಕಲೆ ಹಾಗೂ ಚರಿತ್ರೆಯ ನೂರಾರು ಅಂಶಗಳು ಜಗದ್ವಿಖ್ಯಾತಗೊಂಡು ನಾಡಿನ ಭೂಪಟದಲ್ಲಿ ತನ್ನದೇ ಆದ ಪರಂಪರೆ ಹೊಂದಿದೆ. ಜಿಲ್ಲೆಯ ಜನಪ್ರತಿನಿಧಿಗಳ, ಬುದ್ಧಿಜೀವಿಗಳ ಇಚ್ಛಾಶಕ್ತಿ, ಶ್ರದ್ಧೆ, ಪ್ರಾಮಾಣಿಕ ಕೆಲಸ, ಹೋರಾಟದ ಪ್ರಯತ್ನದಿಂದ ಗದಗ ತಾಲೂಕು ಮಾದರಿ ಕ್ಷೇತ್ರವಾಗಿ ಅಭಿವೃದ್ಧಿ ಹೊಂದಿದೆ.

ಆದರ್ಶ ಶಿಕ್ಷಕ, ಸಾಹಿತಿ, ಉತ್ತಮ ವಾಗ್ಮಿ, ಸಮರ್ಥ ಆಡಳಿತಗಾರ, ಕ್ರಿಯಾಶೀಲ ಸಂಘಟನಾಗಾರ ಜಗನ್ನಾಥ ಜಮಾದಾರರ ಸರ್ವಾಧ್ಯಕ್ಷತೆಯಲ್ಲಿ ಸಹಕಾರ, ಗ್ರಾಮೀಣಾಭಿವೃದ್ಧಿ ಮತ್ತು ಧಾರ್ಮಿಕ ಕ್ಷೇತ್ರಗಳಲ್ಲಿ ವಿಕಾಸ ಹೊಂದಿದ ಪುಣ್ಯ ಭೂಮಿ ಕುರ್ತಕೋಟಿಯಲ್ಲಿ ಗದಗ ತಾಲೂಕಿನ 5ನೇ ಕನ್ನಡ ಸಾಹಿತ್ಯ ಸಮ್ಮೇಳನವು ಆಯೋಜನೆಗೊಂಡಿದೆ. ಕುರ್ತಕೋಟಿ ಗ್ರಾಮವು ಪ್ರಾಚೀನ ಪರಂಪರೆಯಿಂದ ಚಿರಪರಿಚಿತ.

ಕುರಿತಕೋಟೆ, ಕುರಿತಕೊಂಟೆ, ಕುರ್ತಕೋಟೆ ಎಂಬ ಅಭಿನಾಮದಿಂದ ಹೆಸರಾಗಿದೆ. ಚಾಲುಕ್ಯರ ಕಾಲದ ಶಿಲ್ಪಕಲೆ, ಶಿಲಾಶಾಸನ, ಮತ್ತು ಸಾಹಿತ್ಯಿಕ,



ಸಾಂಸ್ಕೃತಿಕ, ಆಧ್ಯಾತ್ಮಿಕ, ಸ್ವಾತಂತ್ರ್ಯ ಹೋರಾಟ, ವೈದ್ಯಕೀಯ, ಲಲಿತ ಕಲೆ, ಸಂಗೀತ–ನಾಟಕ, ಸಹಕಾರ ಕೇಂದ್ರವಾಗಿ ಪ್ರಸಿದ್ಧಿ ಪಡೆದಿದೆ. ಶ್ರೇಷ್ಠ ವಿಮರ್ಶಕ ಕೀರ್ತಿನಾಥ ಕುರ್ತಕೋಟಿ ಜನಸಿದ ಈ ಪವಿತ್ರ ಭೂಮಿಯಲ್ಲಿ ಗದಗ ತಾಲೂಕಿನ 5ನೇ ಕನ್ನಡ ಸಾಹಿತ್ಯ ಸಮ್ಮೇಳನವು ಸಂಪನ್ನಗೊಳ್ಳುವ ಮೂಲಕ ಅಕ್ಷರ ಜಾತ್ರೆಯ ಸಂಭ್ರಮ ಇತಿಹಾಸದ ಪುಟ ಸೇರಲಿದೆ.

ಗದಗ ಜಿಲ್ಲೆಯ ಹಿರಿಯ ಸಾಹಿತಿ ಜೆ.ಕೆ. ಜಮಾದಾರ ಪ್ರಸ್ತುತ ಸಮ್ಮೇಳದ ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಿರುವದರಿಂದ ಸಮ್ಮೇಳನದ ಗೌರವ ಇಮ್ಮಡಿಗೊಂಡಿದೆ. ಜಗನ್ನಾಥ ಜಮಾದಾರ 1949 ಜೂನ್ 1ರಂದು ಬೆಟಗೇರಿಯಲ್ಲಿ ಜನಿಸಿದರು. ಬಿಎ, ಬಿಇಡಿ ಪದವೀಧರರಾದ ಇವರು ಆದರ್ಶ ಶಿಕ್ಷಕರಾಗಿ ಉತ್ತಮ ಸೇವೆ ಸಲ್ಲಿಸಿ ಸಾವಿರಾರು ವಿದ್ಯಾರ್ಥಿಗಳ ಬದುಕು ರೂಪಿಸಿದ ಅಪರೂಪದ ಅಧ್ಯಾಪಕರಾಗಿದ್ದಾರೆ. ಬಹುಮುಖದ ವ್ಯಕ್ತಿತ್ವ ಮತ್ತು ಸೃಜನಶೀಲರಾದ ಇವರು ಸಾಹಿತಿಗಳಾಗಿ, ಆಡಳಿತಗಾರರಾಗಿ, ಸಂಘಟನೆಗಾರರಾಗಿ, ಲೇಖಕರಾಗಿ, ಭಾಷಣಕಾರರಾಗಿ, ವಿವಿಧ ರಚನಾತ್ಮಕ ಸಂಸ್ಥೆಗಳ ಅಧ್ಯಕ್ಷರಾಗಿ, ಸದಸ್ಯರಾಗಿ ಅಮೋಘ ಸೇವೆ ಇವರಿಂದ ಕೈಗೂಡಿದೆ.

ಇದುವರೆಗೂ 32ಕ್ಕೂ ಹೆಚ್ಚು ಮೌಲಿಕ ಕೃತಿಗಳು ಇವರಿಂದ ವಿರಚಿತಗೊಂಡು ಕನ್ನಡಮ್ಮಳ ಉಡಿ ತುಂಬಿವೆ. ಜಮಾದಾರರ ಹತ್ತಾರು ಕೃತಿಗಳು ವಿದ್ಯಾರ್ಥಿಗಳಿಗೆ, ಸಂಶೋಧಕರಿಗೆ, ಬಹರಗಾರರಿಗೆ ಆಧಾರ ಗ್ರಂಥಗಳಾಗಿವೆ.

ಗದಗ ಜಿಲ್ಲಾ ಗ್ರಾಮಕೋಶ ಗ್ರಂಥದ ಸಂಪಾದಕರಾಗಿ, ವಾಸವಿ ಮಾಸಪತ್ರಿಕೆಯ ಸಹ ಸಂಪಾದಕರಾಗಿ ಅನುಪಮ ಸೇವೆ ಸಲ್ಲಿಸಿದ ಮೇರು ವ್ಯಕ್ತಿತ್ವ ಇವರದು. ಗ್ರಾಮ ವಿಕಾಸಕ್ಕೊಂದು ಮಾದರಿ–ಹುಲಕೋಟಿ, ಕೆ.ಎಚ್. ಪಾಟೀಲ–ಕವನ ನಮನ, ಆದಮ್ಯ ಚೇತನ, ಆರ್.ಕೆ. ಜಮಾದಾರ–ಬದುಕು ಬರಹ, ವಿಚಾರ ತರಂಗ, ಗಣೇಶಸಿಂಗ್ ಬ್ಯಾಳಿ, ಧನ್ವಂತರಿಯಂತಹ ಶ್ರೇಷ್ಠ ಅಭಿನಂದನಾ ಗ್ರಂಥ, ಕವನ ಸಂಕಲನ, ಸ್ಮರಣ ಸಂಚಿಕೆಗಳು ಇವರ ಸಂಪಾದನೆಯ ಪ್ರಮುಖ ಕೃತಿಗಳು.

ನಾಡಿನ ಪ್ರತಿಷ್ಠಿತ ದಿನಪತ್ರಿಕೆಗಳಾದ ಸಂಯುಕ್ತ ಕರ್ನಾಟಕ, ವಿಶಾಲ ಕರ್ನಾಟಕ, ಪ್ರಜಾವಾಣಿ, ವಿಜಯ ಕರ್ನಾಟಕ, ನಾಗರಿಕ, ಕರ್ಮವೀರ, ಜನಪದ, ಕರ್ನಾಟಕ ವಿಕಾಸ, ಜಿಯಾಲಾಜಿಕಲ್ ಸೊಸಾಯಿಟಿ ಆಫ್ ಇಂಡಿಯಾ ಜರ್ನಲ್ ವಾರ/ಮಾಸಿಕ ಪತ್ರಿಕೆಗಳಲ್ಲಿ ಇವರ ಅನೇಕ ಲೇಖನಗಳು ಪ್ರಕಟಗೊಂಡು ಓದುಗರ ಮೆಚ್ಚುಗೆಗೆ ಪಾತ್ರವಾಗಿವೆ. ರೇಡಿಯೋ ಮತ್ತು ದೂರದರ್ಶನದಲ್ಲಿ ಇವರ ಉಪನ್ಯಾಸ, ವಿಚಾರಗೋಷ್ಠಿ, ವೀಕ್ಷಕ ವಿವರಣೆ, ಸಂದರ್ಶನ, ಸಾಕ್ಷಚಿತ್ರಗಳು ಹಾಗೂ ಸಾಹಿತ್ಯಿಕ ಅಂಶಗಳು ಪ್ರಸಾರಗೊಂಡಿವೆ.

ಹುಲಕೋಟಿ ಸಹಕಾರ ಶಿಕ್ಷಣ ಸಂಸ್ಥೆಯ ಕೆ.ಎಚ್. ಪಾಟೀಲ ಪ್ರೌಢಶಾಲೆ, ಹುಲಕೋಟಿ ಸಹಕಾರ ಶಿಕ್ಷಣ ಸಂಸ್ಥೆಯ ಬಿ.ಇಡಿ ಮಹಾವಿದ್ಯಾಲಯದ ಸ್ಥಳೀಯ ಆಡಳಿತ ಸಮಿತಿಯ ಅಧ್ಯಕ್ಷರಾಗಿ, ವಿವೇಕ ಪಥ, ಕೆ.ಎಚ್. ಪಾಟೀಲ ಪ್ರತಿಷ್ಠಾನದ ಗೌರವ ಕಾರ್ಯದರ್ಶಿಗಳಾಗಿ ಸಮರ್ಥವಾಗಿ ಕಾರ್ಯ ಮಾಡಿ ಸಂಸ್ಥೆಗಳ ಉನ್ನತಿಗೆ ಸಹಕರಿಸಿದ್ದಾರೆ. 1993ರಿಂದ 2008ರವರಗೆ ಕರ್ನಾಟಕ ರಾಜ್ಯದ ಅಪರೂಪದ ರಾಜಕಾರಣಿ ಡಾ. ಹೆಚ್.ಕೆ. ಪಾಟೀಲರ ಆಪ್ತ ಸಿಬ್ಬಂದಿಯ ಶಾಖೆಯಲ್ಲಿ ಸೇವೆ ಮಾಡಿದ ಅಪಾರ ಅನುಭವ ಇವರದಾಗಿದೆ. ವಿವೇಕಪಥ ಮತ್ತು ಕೆ.ಎಚ್. ಪಾಟೀಲ ಉಭಯ ಸಂಸ್ಥೆಗಳು ಶಿಕ್ಷಣ, ವೈದ್ಯಕೀಯ, ಸಾಮಾಜಿಕ, ಗ್ರಾಮೀಣಾಭಿವೃದ್ಧಿ ಪ್ರಗತಿಯಲ್ಲಿ ಮಾದರಿಯಾಗಿ ಕಾರ್ಯ ಮಾಡಿದ ಹಿನ್ನೆಲೆಯಲ್ಲಿ ಇವರ ಕ್ರಿಯಾತ್ಮಕ ಚಿಂತನೆ ಗುರುತವಾಗಿದೆ.

ಜಿಲ್ಲೆಯ ಪ್ರತಿಷ್ಠಿತ ವಿದ್ಯಾಸಂಸ್ಥೆ ರಾಜೇಶ್ವರಿ ವಿದ್ಯಾನಿಕೇತನ ಮತ್ತು ಪ್ರಗತಿ ಮಿತ್ರ ಪ್ರಿಯದರ್ಶಿನಿ ಸೌಹಾರ್ದ ಸಂಸ್ಥೆಯ ವ್ಯವಸ್ಥಾಪಕ ಸಮಿತಿಯ ಹಿರಿಯ ಸದಸ್ಯರಾಗಿ ಸಂಸ್ಥೆಗಳ ಪ್ರಗತಿಗೆ ಕೈಜೋಡಿಸಿದ್ದಾರೆ. 77ರ ಇಳಿ ವಯಸ್ಸಿನಲ್ಲಿಯೂ ಸಹ ನವ ತರುಣರಾಗಿ ಪಾದರಸದಂತೆ ಸಾಹಿತ್ಯ, ಸಾಮಾಜಿಕ, ಶೈಕ್ಷಣಿಕ, ಧಾರ್ಮಿಕ, ಸಾಂಸ್ಕೃತಿಕ ವೇದಿಕೆಗಳಲ್ಲಿ ಗುರುತಿಸಿಕೊಂಡು ಶ್ರದ್ಧೆ, ಪ್ರಾಮಾಣಿಕ, ನಿಷ್ಠೆ ಮತ್ತು ಇಚ್ಛಾಶಕ್ತಿಯಿಂದ ಮಾಡುವ ಉಪಕ್ರಮಗಳು ಇಂದಿನ ಯುವ ಪಿಳಿಗೆಗೆ ಮಾರ್ಗದರ್ಶನವಾಗಿದೆ.



**– ವಿಶ್ವನಾಥ ಯ.ಕಮ್ಮಾರ.**
ಅಧ್ಯಾಪಕರು, ಬೆಟಗೇರಿ–ಗದಗ.

**ಕಲೆ ಸಾಹಿತ್ಯ, ಸಂಸ್ಕೃತಿಯ ತವರೂರು ಕುರ್ತಕೋಟಿ**

## ಕುರ್ತಕೋಟಿಯ ಇತಿಹಾಸದ ಮೆಲುಕು

* ಕರ್ನಾಟಕದ ನಾಡು–ನುಡಿಗೆ ಕುರ್ತಕೋಟಿ ತನ್ನದೇ ಆದ ಮಹತ್ವಪೂರ್ಣ ಕೊಡುಗೆಗಳನ್ನು ನೀಡಿದೆ. ಪ್ರಾಚೀನ ಕಾಲದಲ್ಲಿ ಅಗ್ರಹಾರವಾಗಿದ್ದ ಈ ಗ್ರಾಮ ಕವಿಗಳ, ವಿದ್ವಜ್ಜನರ, ಮಹಿಮಾ ಪುರುಷರ, ತಪೋನಿಷ್ಠರ ಪಾದಸ್ಪರ್ಶಗಳಿಂದ ಭವ್ಯ ಐತಿಹಾಸಿಕ ಪರಂಪರೆಯನ್ನು ಹೊಂದಿದ್ದು, ಕಲೆ ಸಾಹಿತ್ಯ–ಸಂಸ್ಕೃತಿಯ ತವರೂರಾಗಿದೆ.

ಗದುಗಿನಿಂದ 16 ಕಿ.ಮೀ ದೂರದಲ್ಲಿರುವ ಕುರ್ತಕೋಟಿಯ ಜನರ ಮುಖ್ಯ ಕಸುಬು ಕೃಷಿ. ಸಹಕಾರ ಅವರ ಜೀವನಾಡಿ. ಗದುಗಿನ ಸ್ಥಳಪುರಾಣ 'ಕೃತಪುರ ಮಹಾತೆ'ಯಲ್ಲಿ ಕುರ್ತಕೋಟಿ ಹೆಸರನ್ನು ಉಲ್ಲೇಖಿಸಲಾಗಿದೆ. ಕಾಳಾಮುಖ ಎಂಬ ಮುನಿಗಳ ನೇತೃತ್ವದಲ್ಲಿ ಕೋಟಿಯಜ್ಞವನ್ನು ಮಾಡಲಾಯಿತು ಎಂಬ ಪ್ರತೀತಿ ಇದೆ. ಕೃತಪುರ, ಕುರುತ್ತಕೋಟಿ, ಕುರಿತಕೊಂಟೆ, ಆಳವಾದ ಕೆರೆಯಿರುವ ಪ್ರದೇಶದಿಂದಾಗಿ ಈ ಗ್ರಾಮಕ್ಕೆ ಈ ರೀತಿಯ ಹೆಸರು ಬಂದಿರಬಹುದೆಂದು ಬಹುತೇಕ ವಿದ್ವಾಂಸರ ಅಭಿಪ್ರಾಯವಾಗಿದೆ.

ಪ್ರಾಚೀನ ಕಾಲದ ಏಳು ಶಾಸನಗಳನ್ನು ಹೊಂದಿರುವ ಕುರ್ತಕೋಟಿ ಗದಗ ಜಿಲ್ಲೆಯ ಅತೀ ಪ್ರಾಚೀನ ಗ್ರಾಮಗಳಲ್ಲಿ ಒಂದಾಗಿದೆ. ಶಾಸನಗಳ ಆಧಾರದ ಮೇಲೆ ಕುರ್ತಕೋಟಿಯ ಇತಿಹಾಸವನ್ನು ಬದಾಮಿ ಚಾಲುಕ್ಯರ ಕಾಲದವರೆಗೂ ಕೊಂಡೊಯ್ಯಬಹುದಾಗಿದೆ. ಈ ಕಾಲದ ವಿಜಯಾದಿತನ ಕಾಲದಲ್ಲಿ ಲೋಕನಿಮ್ಮಡಿ



ಕುರ್ತಕೋಟಿಯನ್ನು ಆಳುತ್ತಿದ್ದ. ನಂತರ ಇದು ರಾಷ್ಟ್ರಕೂಟರ ಆಳ್ವಿಕೆಯಲ್ಲಿ ಲೋಕಯ್ಯ ಊರಗೌಡ ಅಥವಾ ಪ್ರಮುಖನಾಗಿದ್ದ. ಕಲ್ಯಾಣ ಚಾಲುಕ್ಯರ ಕಾಲದಲ್ಲಿ ವಿಶೇಷ ಮಹತ್ವ ಪಡೆದ ಈ ಗ್ರಾಮ 200 ಜನರ ಅಗ್ರಹಾರವಾಗಿತ್ತು. ಚಾಲುಕ್ಯರ 300ರ ಮುಳಗುಂದ 12ರ ಪ್ರಮುಖಕೇಂದ್ರವಾಗಿತ್ತು. ನಂತರ ವಿಜಯನಗರ ಆಳ್ವಿಕೆಗೆ ಒಳಪಟ್ಟು ಸಾಮಂತಕ್ಕೆ ಮಾಧವರಸನ ಈ ಪ್ರದೇಶವನ್ನು ಉಂಬಳಿಯಾಗಿ ಪಡೆದು ಆಳಿದನೆಂದು ಹೇಳಲಾಗುತ್ತದೆ. ನಂತರದಲ್ಲಿ ಈ ಭಾಗ ಟಿಪ್ಪು, ಪೇಶ್ವೆ ಆಡಳಿತಕ್ಕೊಳಪಟ್ಟ ಬ್ರಿಟೀಷರ ಕಪಿಮುಷ್ಠಿಗೆ ಸಿಲುಕಿತು.

ಈ ಗ್ರಾಮ ಅನೇಕ ಸ್ವಾತಂತ್ರ್ಯ ಹೋರಾಟಗಾರರು ಹೋರಾಟ ನಡೆಸಿ ರಾಷ್ಟ್ರೀಯ ಚಳುವಳಿಗೆ ತಮ್ಮದೇ ಆದ ಕೊಡುಗೆಗಳನ್ನು ನೀಡಿದೆ. ಈ ಗ್ರಾಮಕ್ಕೆ ಮೈಲಾರಲಿಂಗೇಶ್ವರನ ಆಶೀರ್ವಾದವಿದೆ. ಶೂನ್ಯ ಪೀಠವನ್ನೇರಿದ ಮಹಾನ್ ವಚನಕಾರ ಅಲ್ಲಮಪ್ರಭುಗಳು, ಶ್ರೀ ಅಜಾತ ನಾಗಲಿಂಗಸ್ವಾಮಿಗಳು, ಗೋಂದಾವಲಿಯ ಶ್ರೀ ಬ್ರಹ್ಮಚೈತನ್ಯ ಮಹಾರಾಜರು, ಸದ್ಗುರು ಶ್ರೀ ಬ್ರಹ್ಮಾನಂದ ಗುರುಗಳು ಈ ಗ್ರಾಮಕ್ಕೆ ಭೇಟಿ ನೀಡಿ ಈ ನೆಲವನ್ನು ಪಾವನಗೊಳಿಸಿದ್ದಾರೆ. ಮೂಲತಃ ಕುರ್ತಕೋಟಿಯವರಾದ ಶಿವಶರಣೆ ಪೂಜ್ಯ ಬಸವಾಂಬಿಕಾದೇವಿ ಸೊಲ್ಲಾಪುರದಲ್ಲಿ ನೆಲೆಸಿ ತಮ್ಮ ಆಧ್ಯಾತ್ಮಿಕ ಕಂಪನ್ನು ಬೀರಿದ್ದಾರೆ. ಕುರ್ತಕೋಟಿಯಲ್ಲಿ ಜನಿಸಿದ ಶ್ರೀ ಚಿದಾನಂದ ಅಜ್ಜನವರು ದೇವಿಯ ಆರಾಧಕರಾಗಿದ್ದು, ಅನೇಕ ಪವಾಡಗಳನ್ನು ಮಾಡಿದ್ದಾರೆ.

ಸಾಹಿತ್ಯ ಕ್ಷೇತ್ರಕ್ಕೂ ಕುರ್ತಕೋಟಿ ಅನುಪಮ ಕಾಣಿಕೆಗಳನ್ನು ನೀಡಿದೆ. ರಾಯನಗೌಡರು ಪಾಟೀಲ ಮತ್ತು ಶ್ರೀ ಮೈಲಾರಗೌಡರು ಪಾಟೀಲ ಅದ್ಭುತವಾದ ಗ್ರಂಥ ಭಂಡಾರವನ್ನು ಹೊಂದಿದ್ದರು. ಮೈಲಾರಿಗೌಡರು ಅನೇಕ ಸಂಸ್ಕೃತ ಗ್ರಂಥಗಳನ್ನು ಭಾಷಾಂತರ ಮಾಡಿ ಕಾವ್ಯಗಳನ್ನು ರಚಿಸಿದ್ದಾರೆ. ಕನ್ನಡದ ಶ್ರೇಷ್ಠ ವಿಮರ್ಶಕರಾದ ಪ್ರೊ. ಕೀರ್ತಿನಾಥ ಕುರ್ತಕೋಟಿ ಮೂಲತಃ ಕುರ್ತಕೋಟಿ ಗ್ರಾಮದವರು ಎಂಬುದು ಹೆಮ್ಮೆಯ ವಿಷಯ. ಕಾವ್ಯ, ನಾಟಕ, ಕಾದಂಬರಿ, ಎಲ್ಲಕ್ಕಿಂತ ಹೆಚ್ಚಾಗಿ ಕನ್ನಡ ವಿಮರ್ಶಾ ಕ್ಷೇತ್ರದಲ್ಲಿ ಅವರ ಸಾಧನೆ ಅಮೋಘ.

ಶಿಕ್ಷಣ ಮತ್ತು ಸಹಕಾರ ಕ್ಷೇತ್ರಕ್ಕೂ ಕುರ್ತಕೋಟಿಯ ಕೊಡುಗೆ ಅಮೋಘವಾಗಿದೆ. ಕೆ.ಜಿ. ಕುರ್ತಕೋಟಿ, ಡಾ. ಡಿ.ಎಸ್. ಕುರ್ತಕೋಟಿ, ಡಿ.ಎಂ. ಕುರ್ತಕೋಟಿ, ಕೀರ್ತಿನಾಥ ಕುರ್ತಕೋಟಿ, ಎಲ್.ಡಿ. ಪಾಟೀಲ ಪ್ರಾಧ್ಯಾಪಕರಾಗಿ, ಶಿಕ್ಷಕರಾಗಿ, ನೂರಾರು ವಿದ್ಯಾರ್ಥಿಗಳಿಗೆ ವಿದ್ಯಾದಾನಗೈದಿದ್ದಾರೆ. ಕುರ್ತಕೋಟಿಯ ಸಹಕಾರಿ ಚಳುವಳಿಯ ನೇತಾರರೆಂದರೆ ಶ್ರೀ ಫಕ್ಕೀರಪ್ಪನವರು ಲಕ್ಷ್ಮೇಶ್ವರ ಹಾಗೂ ಅವರ ಸಹೋದರ ಮುದಕಪ್ಪನವರು, ಮುಂದೆ ಕೆ.ಎಚ್. ಪಾಟೀಲರ ನೇತೃತ್ವದಲ್ಲಿ ಅಮರಪ್ಪ ಇನಾಮತಿ, ಖಂಡಪ್ಪಗೌಡ್ರ ಪಾಟೀಲ, ವಿನಾಯಕಗೌಡ ಪಾಟೀಲ, ಮನೋಹರ ಇನಾಮತಿ ಸ್ಮರಣೀಯರು. ಈಗ ಅಪ್ಪಣ್ಣ ಇನಾಮತಿ, ಗಿರೀಶ ಡಬಾಲಿ, ಜಿ.ಎಸ್. ಪಾಟೀಲ ಮುಂತಾದವರು ಸಹಕಾರಿ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.

ಕುರ್ತಕೋಟಿ ಸಾಹಿತ್ಯಕ್ಕೆ ಪ್ರಸಿದ್ಧಿ ಪಡೆದಂತೆ, ಸಂಗೀತ, ಗಮಕ ಗಾಯನಕ್ಕೂ ಹೆಸರಾಗಿದೆ. ಅಲ್ಲಿ ಚಿನ್ನಪ್ಪ ಮಡಿವಾಳರ, (ಅಗಸರ) ಭಾರತರತ್ನ ಪಂ.ಭೀಮಸೇನ ಜೋಶಿಯವರ ಆರಂಭಿಕ ಸಂಗೀತದ ಗುರುಗಳಾಗಿದ್ದರು. ಕುರ್ತಕೋಟಿ ಪಾಟೀಲ ಮನೆತನದ ಕಾಶವ್ವ ಪಂಥರ, ಕೃಷ್ಣಾಬಾಯಿ ಪಾಟೀಲ ಕುಮಾರವ್ಯಾಸ ಮತ್ತು ಜೈಮಿನಿಭಾರತಗಳನ್ನು ಸುಶ್ರಾವ್ಯವಾಗಿ ಓದುತ್ತಿದ್ದರಲ್ಲದೇ ಮಕ್ಕಳಿಗೆ ಅವುಗಳ ಅರ್ಥವನ್ನು ವಿವರಿಸಿ ಹೇಳುತ್ತಿದ್ದರು.

ಕುರ್ತಕೋಟಿಯು ಶಿಲ್ಪಕಲೆಗೂ ಪ್ರಸಿದ್ಧಿ ಹೊಂದಿದ್ದು, ಇಲ್ಲಿನ ಶಿಲ್ಪಿ ಕಂಪ್ಲಿ ಮಾನಪ್ಪ ತಯಾರಿಸಿದ ಶಿಲಾಸ್ಥಿರ ಪಾದುಕೆಗಳ ಮೇಲೆ ಬ್ರಹ್ಮಚೈತನ್ಯ ಮಹಾರಾಜರು ನಿಂತುಕೊಂಡಿದ್ದರು. ಕಲ್ಲಿನ ಪತ್ತಾರ ಗಂಗಪ್ಪ ಹಾಗೂ ಅವನ ಸಹೋದರರು ಗಣೇಶ ಉತ್ಸವಕ್ಕೆ ತಯಾರಿಸುತ್ತಿದ್ದ ಮೂರ್ತಿಗಳು ಇಡೀ ಜಿಲ್ಲೆಗೆ ಪ್ರಸಿದ್ಧಿಯಾಗಿದ್ದವು. ಕುರ್ತಕೋಟಿಯು ಕೋಮುಸೌಹಾರ್ದಕ್ಕೆ ಹೆಸರುವಾಸಿಯಾಗಿದೆ. ಹೀಗೆ ಕುರ್ತಕೋಟಿ ರಾಜಕೀಯ, ಧರ್ಮ, ಶಿಕ್ಷಣ, ಸಾಹಿತ್ಯ, ಕಾನೂನು, ಕಲೆ, ಸಂಸ್ಕೃತಿ, ಮುಂತಾದ ಕ್ಷೇತ್ರಗಳಲ್ಲಿ ಅಪರಿಮಿತ ಕೊಡುಗೆಗಳನ್ನು ನೀಡಿದೆ. ನಿಜವಾದ ಅರ್ಥದಲ್ಲಿ ಸಾಹಿತ್ಯ–ಸಂಸ್ಕೃತಿಯ ತುಂಬು ಮನೆಯಾಗಿದೆ.

**–ಡಾ. ದತ್ತಪ್ರಸನ್ನ ಪಾಟೀಲ.**

## ಕಪ್ಪತ್ತಗಿರಿ ಸಾಹಿತ್ಯ ಫೌಂಡೇಶನ್ ವತಿಯಿಂದ ಅಕ್ಕಮಹಾದೇವಿ ಜಯಂತಿ ಆಚರಣೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಕಪ್ಪತ್ತಗಿರಿ ಫೌಂಡೇಶನ್ ಹಾಗೂ ಕಪ್ಪತ್ತಗಿರಿ ಪ್ರಕಾಶನದ ಕಚೇರಿಯಲ್ಲಿ ಸರಳ ಸಜ್ಜನಿಕೆಯ ವಚನ ಸಾಹಿತ್ಯದ ಸಾಧ್ವಿ, ವೈರಾಗ್ಯ ನಿಧಿ ಅಕ್ಕಮಹಾದೇವಿ ಜಯಂತಿಯನ್ನು ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವ ಕೇಂದ್ರದ ಕಾರ್ಯಾಧ್ಯಕ್ಷ, ಕನ್ನಡ ಅಭಿಮಾನಿ, ಸಮಾಜ ಸೇವಕ ಮಲ್ಲಿಕಾರ್ಜುನ ಖಂಡಮ್ಮನವರ ವಹಿಸಿದ್ದರು. ಅತಿಥಿಗಳಾಗಿ ಸರೋಜಾ ಹುಯಿಲಗೋಳ, ಸಂಪದ ಹುಯಿಲಗೋಳ ಹಾಗೂ ಕಪ್ಪತ್ತಗಿರಿ ಫೌಂಡೇಶನ್ ಪದಾಧಿಕಾರಿಗಳು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ನಿವೃತ್ತ ಅಂಗನವಾಡಿ ಕಾರ್ಯಕರ್ತೆ, ಆಧ್ಯಾತ್ಮಿಕ ಚಿಂತಕಿ ದ್ಯಾಮವ್ವ ಬಸಪ್ಪ ಕಟಗೇರಿ ಅವರನ್ನು ಸನ್ಮಾನಿಸಿ, ಗೌರವಿಸಲಾಯಿತು.

ಕಪ್ಪತ್ತಗಿರಿ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷರಾದ ಚಂದ್ರಕಲಾ ಎಂ.ಇಟಗಿಮಠ ಮಾತನಾಡಿದರು. ಸೌಮ್ಯ ಪ್ರಾರ್ಥಿಸಿದರು. ಮಹಾಲಕ್ಷ್ಮೀ ಇಟಗಿಮಠ ವಂದಿಸಿದರು.

**ಪತ್ರಿಕಾಗೋಷ್ಠಿಯಲ್ಲಿ ಶ್ರೀ ನೀಲಕಂಠ ಪಟ್ಟದಾರ್ಯ ಮಹಾಸ್ವಾಮೀಜಿ ಅಸಮಾಧಾನ**

## ಜಾತಿಗಣತಿ ವರದಿಯಲ್ಲಿ ಕುರಹಿನಶೆಟ್ಟಿ ಸಮಾಜಕ್ಕೆ ಅನ್ಯಾಯ




■ **ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚೆಗೆ ಕರ್ನಾಟಕ ಸರಕಾರ ಜಾರಿಗೊಳಿಸಲು ಮುಂದಾಗಿರುವ ಕಾಂತರಾಜು ಆಯೋಗದ ವರದಿ ಜಾರಿಗೆ ಕುರುಹಿನಶೆಟ್ಟಿ ಸಮಾಜದಿಂದ ಇದಕ್ಕೆ ವಿರೋಧವಿದೆ. ವರದಿಯಲ್ಲಿ ತಿಳಿಸಿರುವ ನಮ್ಮ ಸಮಾಜದ ಅಂಕಿ – ಅಂಶಗಳು ಸತ್ಯಕ್ಕೆ ದೂರವಾಗಿದೆ ಎಂದು ಶ್ರೀ ನೀಲಕಂಠ ಪಟ್ಟದಾರ್ಯ ಮಹಾಸ್ವಾಮೀಜಿ ಅಸಮಾಧಾನ ವ್ಯಕ್ತಪಡಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕುರುಹಿನಶೆಟ್ಟಿ ಸಮಾಜದ ಮೂಲ ಪೀಠದ ಪೀಠಾಧ್ಯಕ್ಷರಾಗಿ ನಾನು ಕರ್ನಾಟಕದಾದ್ಯಂತ ಪ್ರವಾಸ ಕೈಗೊಂಡಾಗ ಕುರುಹಿನಶೆಟ್ಟಿ ಸಮಾಜದ ಜನಸಂಖ್ಯೆಯು ಸುಮಾರು 12 ಲಕ್ಷಕ್ಕೂ ಅಧಿಕವಿರುವುದು ತಿಳಿದು ಬಂದಿದೆ. ಕಾಂತರಾಜು ವರದಿಯಲ್ಲಿ ಕೇವಲ ಒಂದೂವರೆ ಲಕ್ಷ ಎಂದು ನಮೂದಾಗಿದೆ. ಈಗ ಜಾರಿಗೊಳಿಸುತ್ತಿರುವ ಸಮೀಕ್ಷಾ ವರದಿ ಸರಿಯಾಗಿಲ್ಲ. ಹತ್ತು ವರ್ಷಗಳ ಹಿಂದೆ ಮಾಡಿರುವ ಸಮೀಕ್ಷೆಯು ಅವೈಜ್ಞಾನಿಕವಾಗಿರುವುದರಿಂದ ಈಗ ಈ ವರದಿ ಪ್ರಸ್ತುತವಾಗುವುದಿಲ್ಲ ಎಂದರು. ಹಿಂದುಳಿದ ಸಮುದಾಯಗಳಲ್ಲಿ ಒಂದಾಗಿರುವ ಕುರುಹಿನಶೆಟ್ಟಿ ಸಮಾಜವು ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಹಾಗೂ ರಾಜಕೀಯವಾಗಿ ಹಿಂದೆ ಉಳಿದಿರುವುದಕ್ಕೆ ಇಂತಹ ಅವೈಜ್ಞಾನಿಕ, ಅಪ್ರಾಯೋಗಿಕ ಸಮೀಕ್ಷೆಗಳೇ ಕಾರಣ. ಸರಕಾರವು ಆಷ್ಟು ಬೇಗ ಸರಿಯಾದ ಸಮೀಕ್ಷೆ ಮಾಡಿ ನಮ್ಮ ಸಮುದಾಯಕ್ಕೆ ಆದ ಅನ್ಯಾಯವನ್ನು ಸರಿಪಡಿಸಬೇಕು. ಇಲ್ಲವಾದಲ್ಲಿ ನಮ್ಮ ಹಕ್ಕುಗಳಿಗಾಗಿ ಸರ್ಕಾರದ ವಿರುದ್ಧ ಉಗ್ರ ಹೋರಾಟ ಮಾಡುವುದು ಅನಿವಾರ್ಯವಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ನಿಂಗಪ್ಪ ಚೆಗೂರು, ರಘುನಾಥ ತುಕ್ಕಾ, ಮಲ್ಲಿಕಾರ್ಜುನ ಐಲಿ, ಮೈಲಾರಪ್ಪ ಅರಳಿ, ಪ್ರಭು ರೊಡ್ಡಾ, ದೇವಿಂದ್ರಪ್ಪ ಗೊಟೂರ ಉಪಸ್ಥಿತರಿದ್ದರು.

ಬಾಗಲಕೋಟಿ, ಗಂಗಾವತಿ, ಬಳ್ಳಾರಿ, ಹಾಸನ, ತುಮಕೂರು, ಕಲಬುರ್ಗಿ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ 12 ಲಕ್ಷಕ್ಕೂ ಅಧಿಕ ಜನಸಂಖ್ಯೆಯನ್ನು ಹೊಂದಿದ್ದೇವೆ. ಆದರೆ, ಕಾಂತರಾಜು ವರದಿಯಲ್ಲಿ ಕಡಿಮೆ ಸಂಖ್ಯೆಯನ್ನು ತೋರಿಸುವ ಮೂಲಕ ಕುರುಹಿನಶೆಟ್ಟಿ ಸಮುದಾಯಕ್ಕೆ ಅನ್ಯಾಯ ಮಾಡಲಾಗಿದ್ದು, ಜಾತಿ ಗಣತಿಯನ್ನು ಮತ್ತೊಮ್ಮೆ ನಡೆಸಬೇಕು ಎಂದು ಶ್ರೀಗಳು ಮನವಿ ಮಾಡಿದರು.

## ಎ.23ರಂದು ಲೋಕಾಯುಕ್ತ ಜನ ಸಂಪರ್ಕ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಾಯುಕ್ತರು, ಲೋಕಾಯುಕ್ತ ಬೆಂಗಳೂರು ಮತ್ತು ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಎಪ್ರಿಲ್ 23 ರಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯ ಡಾ.ಬಿ.ಆರ್.ಅಂಬೇಡ್ಕರ್ ಭವನ ಮುಳಗುಂದದಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಅಂದು ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರ ಕಚೇರಿಯ ಪ್ರಕಟಣೆ ತಿಳಿಸಿದೆ.

## ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಎಚ್.ಎಂ.ರೇವಣ್ಣ ಅವರು ಎಪ್ರಿಲ್ 21 ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಈ ಕೆಳಗಿನಂತಿದೆ.

ಎಪ್ರಿಲ್ 21 ರಂದು ಬೆಳಿಗ್ಗೆ 9.30 ಗಂಟೆಗೆ ಹುಬ್ಬಳ್ಳಿಯಿಂದ ಹೊರಟು ಬೆಳಿಗ್ಗೆ 10.30 ಗಂಟೆಗೆ ಗದುಗಿಗೆ ಆಗಮಿಸುವರು. ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗದಗ ಜಿಲ್ಲಾ ತ್ರೈಮಾಸಿಕ ಕೆ.ಡಿ.ಪಿ. ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಳ್ಳುವರು. ಸಂಜೆ 5.30 ಗಂಟೆಗೆ ಗದುಗಿನಿಂದ ರಸ್ತೆ ಮೂಲಕ ಹುಬ್ಬಳ್ಳಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

ವಕ್ಫ್ ತಿದ್ದುಪಡಿ ಕಾಯ್ದೆ ವಿರೋಧಿಸಿ ಎಪ್ರಿಲ್ 19ರಂದು ಪ್ರತಿಭಟನೆ । ಪತ್ರಿಕಾಗೋಷ್ಠಿಯಲ್ಲಿ ಮೌಲಾನಾ ಮುಫ್ತಿಆರೀಫ ಕಾಶ್ಮಿ ಧಾರವಾಡ ಮಾಹಿತಿ

# ವಕ್ಫ್ ತಿದ್ದುಪಡಿ ಕಾಯ್ದೆ ತಕ್ಷಣ ಕೈಬಿಡಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ದೇಶದ ಮುಸ್ಲಿಂ ಸಮುದಾಯದ ಕೋಟ್ಯಾಂತರ ಜನರ ವಿರೋಧದ ನಡುವೆಯೂ ನಮ್ಮ ದೇಶದ ಸಂವಿಧಾನದ ವಿರುದ್ಧವಾಗಿ ಕರಾಳ ವಕ್ಫ್ ತಿದ್ದುಪಡಿ ಕಾಯ್ದೆಯನ್ನು ಕೇಂದ್ರ ಸರ್ಕಾರ ಜಾರಿಗೆ ತಂದಿರುವುದನ್ನು ನಾವು ಖಂಡಿಸುತ್ತೇವೆ. ಒಂದು ಸಮುದಾಯವನ್ನು ಹತ್ತಿಕ್ಕುವ ಉದ್ದೇಶದಿಂದ ವಕ್ಫ್ ತಿದ್ದುಪಡಿ ಕಾಯ್ದೆಯನ್ನು ಜಾರಿಗೆ ತಂದು ಬಲವಂತವಾಗಿ ಹೇರಲಾಗುತ್ತಿದೆ. ಕೂಡಲೇ ಕೇಂದ್ರ ಸರ್ಕಾರ ದೇಶದ ಮುಸ್ಲಿಂ ಸಮುದಾಯಕ್ಕೆ ಮಾರಕವಾಗಿರುವ ಈ ಕಾಯ್ದೆಯನ್ನು ಹಿಂಪಡೆಯಬೇಕೆಂದು ಆಗ್ರಹಿಸಿ ಅಂಜುಮನ್-ಎ-ಇಸ್ಲಾಂ ಸಂಸ್ಥೆ ನೇತೃತ್ವದಲ್ಲಿ ಎಪ್ರಿಲ್ 19ರಂದು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಜಮಿಯತ್-ಎ-ಉಲ್ಲಮಾ ಗದಗ ಜಿಲ್ಲಾ ಘಟಕದ ಕಾರ್ಯದರ್ಶಿ




ಮೌಲಾನಾ ಮುಫ್ತಿಆರೀಫ ಕಾಶ್ಮಿ ಧಾರವಾಡ ಹೇಳಿದರು.

ಅವರು ಗದಗ-ಬೆಟಗೇರಿ ಅಂಜುಮನ್-ಎ-ಇಸ್ಲಾಂ ಸಂಸ್ಥೆಯ ನೇತೃತ್ವದಲ್ಲಿ ವಕ್ಫ್ ತಿದ್ದುಪಡಿ ಕಾಯ್ದೆ ವಿರುದ್ಧ ಹಮ್ಮಿಕೊಂಡಿರುವ ಪ್ರತಿಭಟನೆಯ ಮಾಹಿತಿ ನೀಡಲು ಕರೆದಿದ್ದ ಪತ್ರಿಕಾ ಗೋಷ್ಠಿಯನ್ನು ಉದ್ದೇಶಿಸಿ ಮಾತನಾಡುತ್ತಿದ್ದರು.

ವಕ್ಫ್ ಆಸ್ತಿಯು ದೇಶದಲ್ಲಿರುವ ನಮ್ಮ ಪ್ರಾರ್ಥನಾ ಸ್ಥಳಗಳಿಗೆ, ಧಾರ್ಮಿಕ ಕ್ಷೇತ್ರಗಳಲ್ಲಿ ಧರ್ಮದ ಆಚರಣೆಗಳನ್ನು ಮಾಡಲು ದಾನಿಗಳು ತಮ್ಮ ಸ್ವಂತ ಆಸ್ತಿಯನ್ನು ದಾನ ಮಾಡಿರುವುದಾಗಿದೆ. ವಕ್ಫ್ ತಿದ್ದುಪಡಿ ಕಾಯ್ದೆ ಜಾರಿ ಮಾಡುವ ಮೂಲಕ ನಮ್ಮ ಧಾರ್ಮಿಕ ಆಸ್ತಿಗಳನ್ನು ಕಿತ್ತುಕೊಳ್ಳುವದು ಕೇಂದ್ರ ಸರ್ಕಾರದ ಹುನ್ನಾರವಾಗಿದೆ. ಇಂತಹ ಜನವಿರೋಧಿ ಕರಾಳ ಕಾಯ್ದೆಯನ್ನು ನಾವು ಒಪ್ಪಲು ಸಾಧ್ಯವಿಲ್ಲ ಎಂದರು. ಅಂಜುಮನ್ ಸಂಸ್ಥೆ ಕಾರ್ಯದರ್ಶಿ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಕೇಂದ್ರ ಸರ್ಕಾರ ಸಂವಿಧಾನದ ಆಶಯವನ್ನು ಗಾಳಿಗೆ ತೂರಿ ಕೇವಲ ಒಂದು ಸಮುದಾಯವನ್ನು ಗುರಿಯಾಗಿಸಿಕೊಂಡು ವಕ್ಫ್ ತಿದ್ದುಪಡಿ ಕಾಯ್ದೆ ಜಾರಿಗೆ ತಂದಿದೆ. ಈ ಕಾಯ್ದೆಯಿಂದ ದೇಶದ ಮುಸ್ಲಿಂ ಸಮಾಜದ ಅಭಿವೃದ್ಧಿ ಮಾಡುತ್ತೇವೆ ಎಂದು ಎಂದು ಸುಳ್ಳು ಹೇಳುತ್ತಿರುವ ಪ್ರಧಾನ ಮಂತ್ರಿಗಳು ದೇಶದಲ್ಲಿರುವ ವಕ್ಫ್ ಆಸ್ತಿಗಳನ್ನು ಈ ಕಾಯ್ದೆಯ ಮುಖಾಂತರ ಕಬಳಿಸಿ ಬಂಡವಾಳ ಶಾಹಿಗಳಿಗೆ ಮಾರಾಟ ಮಾಡುವ ಕೆಟ್ಟ ಉದ್ದೇಶ ಹೊಂದಿದಂತಿದೆ ಎಂದರು. ಅಂಜುಮನ್-ಎ-ಇಸ್ಲಾಂ ಸಂಸ್ಥೆ ಅಧ್ಯಕ್ಷ ಮಹ್ಮದಯುಸುಫ ನಮಾಜಿ, ಸಮಾಜದ ಮುಖಂಡರಾದ ಸೈಯದಖಾಲೀದ ಕೊಪ್ಪಳ, ಎಂ.ಬಿ. ನದಾಫ್ ವಕೀಲರು ಮಾತನಾಡಿ, ಹೋರಾಟದಲ್ಲಿ ಗದಗ-ಬೆಟಗೇರಿ ಎಲ್ಲಾ ಜಮಾತಗಳ ಅಧ್ಯಕ್ಷರು, ಕಾರ್ಯದರ್ಶಿಗಳು, ಸರ್ವ ಸದಸ್ಯರು, ಸಮಾಜದ ಹಿರಿಯರು ಮತ್ತು ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹೋರಾಟವನ್ನು ಯಶಸ್ವಿಗೊಳಿಸಬೇಕೆಂದು ವಿನಂತಿಸಿದರು.

ಅಂಜುಮನ ಸಂಸ್ಥೆ ಉಪಾಧ್ಯಕ್ಷ ಬಾಬಾಜಾನ ಬಳಗಾನೂರ, ಜೂಸಾಬ ಉಮಚಗಿ, ಎಂ.ಎಂ. ಮಾಳೆಕೊಪ್ಪ, ರಫೀಕ ಜಮಾಲಖಾನವರ, ಉಮರಫಾರುಖ ಹುಬ್ಬಳ್ಳಿ, ಅನ್ವರ ಶಿರಹಟ್ಟಿ, ಮಹ್ಮಮದಹನೀಫ ಶಾಲಗಾರ, ನಿಜಾಮುದ್ದಿನ ಕಾಟಾಪೂರ ಮುಂತಾದವರು ಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

> ಸಂವಿಧಾನ ವಿರೋಧಿ ವಕ್ಫ್ ತಿದ್ದುಪಡಿ ಕಾಯ್ದೆ ವಿರೋಧಿಸಿ, ಪ್ರವಾದಿ ಪೈಗಂಬರರ ಕುರಿತು ಅವಹೇಳನಕಾರಿಯಾಗಿ ಮಾತನಾಡಿರುವ ಕೋಮುವಾದಿ ಬಸನಗೌಡ ಪಾಟೀಲ ಯತ್ನಾಳರ ಮೇಲೆ ರಾಜ್ಯದ ಮುಖ್ಯಮಂತ್ರಿಗಳು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಎಪ್ರಿಲ್ 19ರಂದು 11 ಗಂಟೆಗೆ ಮುಳಗುಂದ ನಾಕಾದಲ್ಲಿರುವ ಶಾಹಿ ಈದ್ಗಾ ಮೈದಾನದಿಂದ ರ‍್ಯಾಲಿಯನ್ನು ಪ್ರಾರಂಭಿಸಿ ಟಿಪ್ಪುಸುಲ್ತಾನ ಸರ್ಕಲ್ ಮಾರ್ಗವಾಗಿ ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ಮನವಿ ನೀಡಿ ಆಗ್ರಹಿಸಲಾಗುವುದೆಂದು ಇಮ್ತಿಯಾಜ ಆರ್.ಮಾನ್ವಿ ಹೇಳಿದರು.

## ಹೊಸ ಆರ್ಥಿಕ ವರ್ಷದ ಅಂಗವಾಗಿ ಲಕ್ಷ್ಮೀ ಪೂಜೆ

■ವಿಜಯಸಾಕ್ಷಿ ಸುದ್ದಿ, ಗದಗ



ಭಾರತೀಯ ಜೀವ ವಿಮಾ ನಿಗಮ ಗದಗ 1ನೇ ಶಾಖೆಯು ತನ್ನ 2025-26ನೇ ಸಾಲಿನ ಆರ್ಥಿಕ ವರ್ಷದ ಹೊಸ ಹಣಕಾಸು ವ್ಯವಹಾರದ ಅಂಗವಾಗಿ ಲಕ್ಷ್ಮೀ ಪೂಜೆಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮವನ್ನು ಶಾಖೆಯ ಮ್ಯಾನೇಜರ್ ಎಚ್.ಎಂ. ಭಜಂತ್ರಿ ಉದ್ಘಾಟಿಸಿ ಮಾತನಾಡಿ, ಎಲ್‌ಐಸಿ ದೇಶದಲ್ಲೇ ಅತಿ ದೊಡ್ಡ ವಿಮಾ ಸಂಸ್ಥೆಯಾಗಿದ್ದು, ಈ ವಿಮಾ ಸಂಸ್ಥೆ ತನ್ನ ಗ್ರಾಹಕರ ಹಿತರಕ್ಷಣೆಗಾಗಿ ಕೆಲಸ ಮಾಡುತ್ತಿದೆ. ಇದೀಗ ತನ್ನ ಎಲ್ಲಾ ಪಾಲಿಸಿಗಳನ್ನು ಹೊಸದಾಗಿ ನವೀಕರಿಸಿದ್ದು ಗ್ರಾಹಕರು ಹೆಚ್ಚು ಹೆಚ್ಚು ಪಾಲಿಸಿಗಳನ್ನು ತೆಗೆದುಕೊಂಡು ತಮ್ಮ ಜೀವನವನ್ನು ಆರ್ಥಿಕವಾಗಿ ಭದ್ರಪಡಿಸಿಕೊಳ್ಳಬೇಕು ಎಂದು ಹೇಳಿದರು.

ಉಪ ಶಾಖಾಧಿಕಾರಿ ಮಾಹಾಂತೇಶ ಮಾತನಾಡಿ, ಗದಗ 1ನೇ ಶಾಖೆ ಧಾರವಾಡ ವಿಭಾಗ ಮಟ್ಟದಲ್ಲಿ ಉನ್ನತ ಸ್ಥಾನ ಪಡೆದಿದೆ. ಭಾರತೀಯ ಜೀವ ವಿಮಾ ನಿಗಮ ಭಾರತ ಸರ್ಕಾರದ ಅಧೀನದಲ್ಲಿ ಕೆಲಸ ಮಾಡುತ್ತಿದ್ದು, ತನ್ನ ಎಲ್ಲಾ ಶೇರುಗಳನ್ನು ಸರ್ಕಾರದ ಜನೋಪಯೋಗಿ ಕಾರ್ಯಗಳಲ್ಲಿ ತೊಡಗಿಸಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ವಿಮಾ ಪ್ರತಿನಿಧಿ ಯಲ್ಲಪ್ಪ ಎಚ್.ಬಾಬರಿ ದಂಪತಿಗಳ ವಿವಾಹ ವಾರ್ಷಿಕೋತ್ಸವವನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಅಭಿವೃದ್ಧಿ ಅಧಿಕಾರಿಗಳಾದ ಚಂದ್ರಕಾಂತ ಎಸ್, ಸಿದ್ಧಾರ್ಥ್, ಕಾಮತ್, ತಳವಾರ, ಪ್ರಕಾಶ ಅಂಗಡಿ, ಎಸ್.ಲಮಾಣಿ, ಪ್ರಭು ರವದಿ, ಎಂ. ದೊಡ್ಡಮನಿ, ಕುಂಬಾರ ಸೇರಿದಂತೆ ಶಾಖೆಯ ಸಿಬ್ಬಂದಿ ವರ್ಗ ಮತ್ತು ವಿಮಾ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

ಗೊಜನೂರ ಗ್ರಾಮದಲ್ಲಿ ರಸ್ತೆ ಸುಧಾರಣೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದ ಶಾಸಕ ಡಾ. ಚಂದ್ರು ಲಮಾಣಿ

# ಗುಣಮಟ್ಟದಲ್ಲಿ ರಾಜಿಯ ಪ್ರಶ್ನೆಯೇ ಇಲ್ಲ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಕ್ಷೇತ್ರದಲ್ಲಿ ರಸ್ತೆಗಳ ಸುಧಾರಣೆಗೆ ವಿಶೇಷ ಅನುದಾನ ಕಲ್ಪಿಸುವಂತೆ ಕ್ರಿಯಾಯೋಜನೆಯೊಂದಿಗೆ ಸರ್ಕಾರಕ್ಕೆ ಮನವಿ ಮಾಡಿಕೊಂಡಿದ್ದು, ಅನುದಾನದ ಲಭ್ಯತೆಯ ಆಧಾರದಲ್ಲಿ ಪ್ರಮುಖ ರಸ್ತೆಗಳು ಸೇರಿ ಗ್ರಾಮೀಣ ಪ್ರದೇಶದ ರಸ್ತೆಗಳನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇನೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಗುರುವಾರ ಗೊಜನೂರ ಗ್ರಾಮದಲ್ಲಿ ಲಕ್ಷ್ಮೇಶ್ವರ-ಗದಗ ಸಂಪರ್ಕಿಸುವ ಕೈಗಾ-ಇಳಕಲ್ ರಾಜ್ಯ ಹೆದ್ದಾರಿಯ ಆಯ್ದ ಭಾಗದಲ್ಲಿ 4 ಕೋಟಿ ರೂಗಳ ವೆಚ್ಚದಲ್ಲಿ ರಸ್ತೆ ಸುಧಾರಣೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಗದಗ-ಲಕ್ಷ್ಮೇಶ್ವರ ಸಂಪರ್ಕಿಸುವ ಈ ರಸ್ತೆ ಅಭಿವೃದ್ಧಿ ಜನರ ಬಹುದಿನಗಳ ಬೇಡಿಕೆಯಾಗಿದೆ. ಈ ಬಗ್ಗೆ ಸಾಕಷ್ಟು ಮಾಧ್ಯಮ ವರದಿಗಳು ಸರ್ಕಾರ ಮತ್ತು ಜನಪ್ರತಿನಿಧಿಗಳನ್ನು ಎಚ್ಚರಿಸುವ ಕೆಲಸ ಮಾಡಿವೆ. ಈ ರಸ್ತೆಯನ್ನು ಮೇಲ್ದರ್ಜೆಗೇರಿಸಿ ಬಂಕಾಪುರ-ಗದಗವರೆಗೆ ಅಭಿವೃದ್ಧಿಪಡಿಸುವ ಬಗ್ಗೆ ಸಂಸದ ಬಸವರಾಜ ಬೊಮ್ಮಾಯಿ ಕೇಂದ್ರದ ಸಚಿವರ ಮನವೊಲಿಸುವ ಪ್ರಯತ್ನ ಮಾಡಿದ್ದಾರೆ. ರಾಜ್ಯ ಸರ್ಕಾರ ಕ್ಷೇತ್ರದ ರಸ್ತೆ ಅಭಿವೃದ್ಧಿಗೆ ನೀಡಿದ ಅನುದಾನದಲ್ಲಿ ಸೂರಣಗಿ, ಬಾಲೆಹೊಸೂರ, ಹೊಸಳ್ಳಿ ಇನ್ನಿತರ ಭಾಗದ ರಸ್ತೆಗಳ ಕಾಮಗಾರಿಯನ್ನು ಆದಷ್ಟು ಬೇಗ ಪ್ರಾರಂಭಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷ ಮಂಜುನಾಥ ಚಲವಾದಿ, ಉಪಾಧ್ಯಕ್ಷ ಮಹಾಂತಗೌಡ ಪಾಟೀಲ, ಸಿ.ಪಿ. ಮಾಡಳ್ಳಿ, ರಮೇಶ ದನದಮನಿ, ಮಂಜುನಾಥ ಕಣವಿ, ಮುತ್ತಣ್ಣ ವಡಕಣ್ಣವರ, ಶಿವನಗೌಡ ಕಂಠಿಗೌಡರ, ನೀಲಪ್ಪ ಗುಡ್ಡಣ್ಣವರ, ಚಂದ್ರೇಗೌಡ ಪಾಟೀಲ, ನಿಂಗನಗೌಡ ಪಾಟೀಲ, ಹನಮಂತಪ್ಪ ಮಾದರ, ಮಹೇಶ ಅಥಣಿ, ಭೀಮಪ್ಪ ನಾಯಕ್, ದ್ಯಾಮಣ್ಣ ಅಡರಕಟ್ಟಿ, ಪಿಡಿಓ ಶಿವಾನಂದ ಮಾಳವಾಡ, ಗಂಗಾಧರ ಮೆಣಸಿನಕಾಯಿ, ಜಾನು ಲಮಾಣಿ, ಹನುಮಂತೇಗೌಡ ಪಾಟೀಲ, ನಿಂಗನಗೌಡ ಕಣಿವಿ, ಶಂಭುಲಿಂಗಗೌಡ ಪಾಟೀಲ, ಮಾಬುಸಾಬ ಆನಿ, ರಾಕೇಶ ಪುರದ, ನೀಲಪ್ಪಗೌಡ ಪಾಟೀಟ, ಪಂಚಾಕ್ಷರ ಸವಣೂರು, ಗುತ್ತಿಗೆದಾರ ಡಿ.ಎಂ. ಅಡರಕಟ್ಟಿ ಮತ್ತಿತರರಿದ್ದರು.

> ಈ ರಸ್ತೆಯಲ್ಲಿ ಓವರ್‌ಲೋಡ್‌ನೊಂದಿಗೆ ಟಿಪ್ಪರ್‌ಗಳು ಸಂಚರಿಸುವುದರಿಂದ ಗುಣಮಟ್ಟದ ಕಾಮಗಾರಿ ಮಾಡಬೇಕು. ಕಳಪೆ ಕಾಮಗಾರಿ ನಡೆದಿರುವದು ಕಂಡು ಬಂದಲ್ಲಿ ತಕ್ಷಣದಲ್ಲಿ ಕ್ರಮಕ್ಕೆ ಶಿಫಾರಸ್ಸು ಮಾಡುತ್ತೇನೆ. ಯಾವುದೇ ಹಂತದಲ್ಲಿಯೂ ಗುಣಮಟ್ಟದಲ್ಲಿ ರಾಜಿಯ ಪ್ರಶ್ನೆಯೇ ಇಲ್ಲ ಎಂದು ಗುತ್ತಿಗೆದಾರರಿಗೆ ಸೂಚ್ಯವಾಗಿ ಹೇಳಿದರಲ್ಲದೆ, ಜೂನ್ ತಿಂಗಳೊಳಗೆ ಕಾಮಗಾರಿಯನ್ನು ಮುಗಿಸಿ ಗುಣಮಟ್ಟವನ್ನು ಕಾಯ್ದುಕೊಳ್ಳಲು ಶಾಸಕ ಡಾ. ಚಂದ್ರು ಲಮಾಣಿ ಸೂಚಿಸಿದರು.

# ಮೈನವಿರೇಳಿಸಿದ ಕುಸ್ತಿ ಪಂದ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಕೋಡಿಯಲ್ಲಮ್ಮ ದೇವಿ ದೇವಸ್ಥಾನದ ಜಾತ್ರಾಮಹೋತ್ಸವ ಅಂಗವಾಗಿ ಬುಧವಾರ ದೇವಸ್ಥಾನದ ಬಯಲಿನಲ್ಲಿ ಅಂತಿಮ ಹಂತದ ಮುಕ್ತ ಕುಸ್ತಿ ಪಂದ್ಯಾವಳಿಗಳು ನಡೆದವು. ಮಳೆಯ ಆತಂಕದ ನಡುವೆಯೂ ಪಂದ್ಯಾವಳಿಗಳು ನಿರಾಂತಂಕವಾಗಿ ಜರುಗಿ ಪೈ.ನಿಂಗಪ್ಪ ಬೊಮ್ಮನಹಳ್ಳಿ ವಿಜೇತರಾಗಿ ಹೊರಹೊಮ್ಮಿದರು.

ಫೈನಲ್ ವಾರಗಿ ಪೈಕಿ ಕುಸ್ತಿಯಲ್ಲಿ ಕಣಗಿನಹಾಳದ ಬಸವರಾಜರನ್ನು ಸೋಲಿಸಿದ ಬೊಮ್ಮನಹಳ್ಳಿಯ ನಿಂಗಪ್ಪ ಬೆಳ್ಳಿ ಕಡಗ ಮತು ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡರು. ನಂತರ ನಡೆದ ಪರಸಿ ಪೈಕಿ ಕುಸ್ತಿಯಲ್ಲಿ ಹಿರೇಕೆರೂರದ ಕಿರಣ ಪೈಲ್ವಾನ್‌ರೊಂದಿಗೆ ಸೆಣಸಿ ಚಿತ್ ಮಾಡುವ ಮೂಲಕ ಬೊಮ್ಮನಹಳ್ಳಿಯ ಪೈಲ್ವಾನ್ ನಿಂಗಪ್ಪ ವಿಜೇತರಾಗಿ ಬೆಳ್ಳಿ ಕಡಗ ಧರಿಸಿಕೊಂಡರು.

ಮುಸ್ಸಂಜೆಯಲ್ಲಿ ನಡೆದ ವಾರಗಿ ಪೈಕಿ-ಪರ್ಸಿ ಪೈಕಿ ಕುಸ್ತಿ ಅಂತಿಮ ಪಂದ್ಯಾವಳಿಯಲ್ಲಿ ಸೆಣಸಿದ ಕಲಿಗಳ ವಿವಿಧ ಭಂಗಿ, ಪಟ್ಟು, ಕರಾಮತ್ತುಗಳು ನೋಡುಗರ ಮೈನವಿರೇಳಿಸುವಂತೆ ಮಾಡಿದವು. 3 ದಿನ ನಡೆದ ಕುಸ್ತಿ ಸೆಣಸಾಟದಲ್ಲಿ ಧಾರವಾಡ, ಹುಬ್ಬಳ್ಳಿ, ಹಾವೇರಿ, ಕೊಲ್ಲಾಪುರ, ಗುಲಬರ್ಗಾ, ಹೊನ್ನಳ್ಳಿ, ಹಿರೇ-ಕೆರೂರ, ಬಾಲೆಹೊಸೂರ, ಬೊಮ್ಮನಹಳ್ಳಿ, ಲಕ್ಕುಂಡಿ, ಜಮಖಂಡಿ, ಕುರ್ತಕೋಟಿ, ಜಕ್ಕಲಿ, ಮುಳಗುಂದ, ಕಣಗಿನಹಾಳ, ಲಕ್ಷ್ಮೇಶ್ವರ ಮತ್ತಿತರರ ಕಡೆಗಳಿಂದ 50 ಕ್ಕೂ ಹೆಚ್ಚು ಕುಸ್ತಿ ಪೈಲ್ವಾನರು ಭಾಗವಹಿಸಿದ್ದರು.

ಸಂಜೆ ಗೆಲುವು ಸಾಧಿಸಿದ ಕುಸ್ತಿ ಪಟುಗಳಿಗೆ ಬಹುಮಾನ ವಿತರಿಸಿ ಮಾತನಾಡಿದ ಅತಿಥಿಗಳು, ಕುಸ್ತಿ ನಮ್ಮ ಹಿರಿಯರಿಂದ ಬಳುವಳಿಯಾಗಿ ಬಂದ ಜಾನಪದ ಶೈಲಿಯ ಗ್ರಾಮೀಣ ಕ್ರೀಡೆಯಾಗಿದೆ. ನಮ್ಮ ಸಂಸ್ಕೃತಿ, ಪರಂಪರೆಯ ಪ್ರತೀಕವಾದ ಗ್ರಾಮೀಣ ಕ್ರೀಡೆಗಳನ್ನು ಉಳಿಸಿ-ಬೆಳೆಸಿಕೊಂಡು ಹೋಗುವುದು ಎಲ್ಲರ ಜವಾಬ್ದಾರಿಯಾಗಿದೆ. ಜಾತ್ರಾ ಮಹೋತ್ಸವ ಅಂಗವಾಗಿ ಸಂಪ್ರದಾಯದಂತೆ ನಡೆಸಿಕೊಂಡು ಬರಲಾಗುತ್ತಿರುವ ಈ ಕುಸ್ತಿ ಪಂದ್ಯಾವಳಿಯನ್ನು ದೇವಸ್ಥಾನ ಸೇವಾ ಕಮಿಟಿ, ಭಕ್ತಮಂಡಳಿ, ಪಟ್ಟಣದ ಹಿರಿಯರು ಮುಂದುವರೆಸಿಕೊಂಡು ಹೋಗುತ್ತಿರುವುದು ಶ್ಲಾಘನೀಯ ಎಂದರು.

ನಿಂಗಪ್ಪ ವಿಜೇತರಾಗುತ್ತಿದ್ದಂತೆ ಕುಸ್ತಿ ಅಭಿಮಾನಿಗಳು, ಯುವಕರು ಮೈದಾನಕ್ಕೆ ನುಗ್ಗಿ ಪೈಲ್ವಾನರನ್ನು ಹೊತ್ತು ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಶ್ರೀ ಕೋಡಿಯಲ್ಲಮ್ಮ ದೇವಿ ದೇವಸ್ಥಾನದ ಕಮಿಟಿಯವರು, ಓಣಿಯ ಹಿರಿಯರು, ಪೈಲ್ವಾನರು ಇದ್ದರು.

## ಒಗ್ಗಟ್ಟಿನಿಂದ ಸಂವಿಧಾನವನ್ನು ಉಳಿಸೋಣ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನ ರಚನಾ ಸಭೆಗೆ ಹೋಗಲು ಪಶ್ಚಿಮ ಬಂಗಾಳದಿಂದ ಮುಸ್ಲಿಮ್ ಲೀಗ್ ಮೂಲಕ ಮುಸ್ಲಿಮರು ಬೆಂಬಲಿಸಿ ಗೆಲ್ಲಿಸಿದ್ದರು ಎಂದು ಭ್ರಾತೃತ್ವ ಸಮಿತಿಯ ಜಿಲ್ಲಾ ಸಂಚಾಲಕ ಎಸ್.ಎ. ಗಫಾರ್ ಹೇಳಿದರು. ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಭ್ರಾತೃತ್ವ ಸಮಿತಿಯಿಂದ ಹಮ್ಮಿಕೊಂಡಿದ್ದ ಡಾ. ಅಂಬೇಡ್ಕರ್ ಅವರ 134ನೇ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದೇಶದ ಎಲ್ಲ ಜಾತಿ-ಜನಾಂಗದವರಿಗೆ ಅನುಕೂಲವಾಗುವಂತೆ ಡಾ. ಬಿ.ಆರ್. ಅಂಬೇಡ್ಕರ್ ಸಂವಿಧಾನ ರಚಿಸಿದ್ದಾರೆ. ಎಲ್ಲಾ ಜನಾಂಗದವರು ಒಗ್ಗಟ್ಟಾಗಿ ಸಂವಿಧಾನವನ್ನು ಉಳಿಸಿಕೊಳ್ಳುವಂತೆ ಅವರು ಕೋರಿದರು. ಭ್ರಾತೃತ್ವ ಸಮಿತಿಯ ಸಂಸ್ಥಾಪಕ, ಹೈಕೋರ್ಟ್ ನ್ಯಾಯವಾದಿ ಮಂಜುನಾಥ್ ಬಾಗೇಪಲ್ಲಿ ಮಾತನಾಡಿ, ಆಗ ರಾಮ ಸೀತೆಯನ್ನು ಕಾಡಿಗೆ ಕಳುಹಿಸಿದರೆ, ಡಾ. ಬಿ.ಆರ್. ಅಂಬೇಡ್ಕರ್ ಮಹಿಳೆಯನ್ನು ಲೋಕಸಭೆಗೆ ಕಳುಹಿಸಿದರು ಎಂದು ನುಡಿದರು. ದಲಿತ ಸಂಘರ್ಷ ಸಮಿತಿ (ಭೀಮಾವಾದ) ರಾಜ್ಯ ಸಂಘಟನಾ ಸಂಚಾಲಕ ರಾಮಣ್ಣ ಚೌಡಕಿ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ್ ಅವರು ಭಾರತಕ್ಕೆ ಅತ್ಯುತ್ತಮ ಸಂವಿಧಾನವನ್ನು ರಚಿಸಿದ್ದಾರೆ. ಎಲ್ಲಾ ಸಮಾಜದವರು, ನಾಯಕರು, ಯುವಕರು, ಅಕ್ಕ-ತಂಗಿಯರು ಕೂಡಿ ಡಾ. ಅಂಬೇಡ್ಕರ್ ಅವರ ಜಯಂತಿಯನ್ನು ವಿಜ್ರಂಭಣೆಯಿಂದ ಆಚರಣೆ ಮಾಡುತ್ತಿರುವುದು ಸಂತಸ ತಂದಿದೆ ಎಂದರು.

ಕರ್ನಾಟಕ ಮಾದಿಗ ರಕ್ಷಣಾ ವೇದಿಕೆಯ ಜಿಲ್ಲಾ ಅಧ್ಯಕ್ಷ ಮುದುಕಪ್ಪ ಹೊಸಮನಿ, ಭ್ರಾತೃತ್ವ ಸಮಿತಿಯ ಮುಖಂಡ ಫಾದರ್ ಚನ್ನಬಸಪ್ಪ ಅಪ್ಪಣ್ಣವರ್ ಮಾತನಾಡಿದರು. ಭ್ರಾತೃತ್ವ ಸಮಿತಿಯ ಕಾರ್ಯಕರ್ತ ಸುಂಕಪ್ಪ ಮೀಸಿ, ಜನಪರ ಸಂಘಟನೆಗಳ ಒಕ್ಕೂಟದ ಮುಖಂಡ ಗೌಸ್ ನೀಲಿ, ಗವಿಸಿದ್ದಪ್ಪ ಹಲಗಿ, ಗಾಳೆಪ್ಪ ಮುಂತಾದವರು ಭಾಗವಹಿಸಿದ್ದರು.

## ಎಂ.ಬಿ.ಎಚ್. ಶಿಕ್ಷಣ ಮಹಾವಿದ್ಯಾಲಯದಲ್ಲಿ ಅಂಬೇಡ್ಕರ್ ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ವಿದ್ಯಾದಾನ ಸಮಿತಿಯ ಶ್ರೀಮತಿ ಎಂ.ಬಿ. ಹುಯಿಲಗೋಳ ಶಿಕ್ಷಣ ಮಹಾವಿದ್ಯಾಲಯದಲ್ಲಿ ಭಾರತದ ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ ಅಂಬೇಡ್ಕರರ 134ನೇ ಜಯಂತಿಯನ್ನು ಆಚರಿಸಲಾಯಿತು.

ಕಾರ್ಯಕ್ರಮವನ್ನು ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಗಂಗೂಬಾಯಿ ಪವಾರ ಉದ್ಘಾಟಿಸಿ ಮಾತನಾಡಿ, ಡಾ. ಅಂಬೇಡ್ಕರರು ಸಾಮಾಜಿಕ ಸಮಾನತೆ, ಶೈಕ್ಷಣಿಕ ಪ್ರಗತಿ ಮತ್ತು ಮಾನವ ಹಕ್ಕುಗಳ ಪರಿಪೋಷಕರಾಗಿದ್ದಾರೆ. ಅವರು ನಮಗೆ ಸಂವಿಧಾನವನ್ನು ಕೊಟ್ಟ ಮಹಾನ್ ಮಾನವತಾವಾದಿ.

ಅವರ ಮಾರ್ಗದರ್ಶನದಲ್ಲಿ ಸಮಾಜದ ಪ್ರತಿಯೊಬ್ಬ ಪ್ರಜೆ ಮುಂದುವರಿಯಬೇಕು ಎಂದರು. ಪ್ರಶಿಕ್ಷಣಾರ್ಥಿ ಬಸವರಾಜ ಪ್ರಾರ್ಥನಾ ಗೀತೆಯನ್ನು ಹಾಡಿದರು. ಚಂದ್ರಪ್ಪ ಅಂಬೇಡ್ಕರ್ ಜಯಂತಿಯ ಕುರಿತು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಎಲ್ಲ ಉಪನ್ಯಾಸಕರು, ಸಿಬ್ಬಂದಿ ವರ್ಗದವರು ಹಾಗೂ ಎಲ್ಲಾ ಪ್ರಶಿಕ್ಷಣಾರ್ಥಿಗಳು ಪಾಲ್ಗೊಂಡಿದ್ದರು.

# ಕಾರ್ಮಿಕ ಕಲ್ಯಾಣ ಸಂಸ್ಥೆಯಿಂದ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ಕಾಟನ್ ಮಾರ್ಕೆಟ್ ರಸ್ತೆಯ ಅಜಂತಾ ಹೊಟೇಲ್ ಎದುರಿನ ಕಾರ್ಮಿಕ ಕಲ್ಯಾಣ ಸಂಸ್ಥೆಯ ಕಾರ್ಯಾಲಯದಲ್ಲಿ ಡಾ. ಬಿ.ಆರ್. ಅಂಬೇಡ್ಕರರ ಜಯಂತಿಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಮಹಮ್ಮದಇರ್ಫಾನ ಡಂಬಳ, ಉಪಾಧ್ಯಕ್ಷ ಶಂಕರಗೌಡ ಭರಮಗೌಡ್ರ, ಪ್ರಧಾನ ಕಾರ್ಯದರ್ಶಿ ನಾಸೀರ ಚಿಕೇನಕೊಪ್ಪ, ನಿಂಗಪ್ಪ ಕಟ್ಟಿಮನಿ, ಶಿವಶಂಕರಗೌಡ ಕರಿಸೋಮನಗೌಡ್ರ, ಮಹಮ್ಮದಯೂಸೂಫ ಬೇಪಾರಿ, ತೌಸಿಫ, ಸಮೀರ ಹೊನ್ನಳ್ಳಿ, ರಾಮು ಬಾಗಲಕೋಟ, ಶಬ್ಬೀರ ತಹಸೀಲ್ದಾರ, ಖಾಜೇಸಾಬ ಗಬ್ಬೂರ, ಯಂಕಪ್ಪ ತಾಳದವರ, ನಜೀರ ಬಳ್ಳಾರಿ, ಖಾದರಭಾಷಾ ನವಲಗುಂದ, ರಫೀಕ ಹಣಗಿ, ಮಹಮ್ಮದರಫೀಕ ಹಣಗಿ, ಶಾಬುದ್ದೀನ ಧಾರವಾಡ, ಸಾದಿಕ್ ಧಾರವಾಡ, ಮಂಜುನಾಥ ಹೂವಿನಹಳ್ಳಿ, ಸಾದಿಕ್ ಅರಗಂಜಿ, ಮುನ್ನಾ ಹರ್ಲಾಪೂರ, ರಸೀದ ನಾಗರದಿನ್ನಿ, ಇದರೀಷ ಮುಲ್ಲಾ, ಮೆಹಬೂಬ ಬೆಟಗೇರಿ, ರೆಹಮಾನಸಾಬ ಕಳಸಾಪೂರ, ಮುನ್ನಾ ಮುಳಗುಂದ, ರಾಘು ಪತ್ತಾರ, ಜಬೀವುಲ್ಲಾ ಬೋದ್ಲೆಖಾನ, ಆನಂದ ಗಡ್ಡದವರ, ದುರಗೇಶ ಕಿನ್ನರಿ, ಹುಸೇನಸಾಬ ಬೆಳಗಟ್ಟಿ, ಇಸ್ಮಾಯಲ್ ಶಿರವಾರ, ತೌಸಿಫ ಗೊಗೇರಿ, ಮಹಮ್ಮದರಫೀಕ ಕರೇಕಾಯಿ, ಫಾರೂಕ ಶಿರಹಟ್ಟಿ, ಚೇತನಸಿಂಗ ತಾಳಿಕೋಟಿ, ಅಬ್ಬು ವಾನಂಬಾಡಿ, ರಮೇಶ ವಾಲ್ಮೀಕಿ, ಶಿವಮಣಿ ಕುರಗೋಡ, ದಾವಲ, ಮುನ್ನಾ ಗಡಾದ, ಜುಬೇರ ಧಾರವಾಡ, ವಸಂತ ಮುಂತಾದವರು ಉಪಸ್ಥಿತರಿದ್ದರು.

## ಐತಿಹಾಸಿಕ ಸ್ಥಳಗಳು ದೇಶದ ಆಸ್ತಿ




■ ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಸುತ್ತಮುತ್ತ ಇರುವ ಐತಿಹಾಸಿಕ ಸ್ಥಳಗಳನ್ನು ಹಾಗೂ ಸ್ಮಾರಕಗಳನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಅಂಚೆ ಆಧೀಕ್ಷಕರಾದ ಜಯದೇವ ಕಡಗಿ ಹೇಳಿದರು.

ಅವರು ನಗರದ ಐತಿಹಾಸಿಕ ಶ್ರೀ ವೀರನಾರಾಯಣ ದೇವಸ್ಥಾನದ ಆವರಣದಲ್ಲಿ ಗುರುವಾರ ಅಂಚೆ ಇಲಾಖೆಯಿಂದ ಜರುಗಿದ ಪಾರಂಪರಿಕ ನಡಿಗೆ ಕಾರ್ಯಕ್ರಮದಲ್ಲಿ ಮಾತನಾಡಿ, ಐತಿಹಾಸಿಕ ಸ್ಥಳಗಳು ದೇಶದ ಶ್ರೀಮಂತಿಕೆ ಸಾರುವ ಆಸ್ತಿಗಳಾಗಿವೆ. ಅವುಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಕೊಡುಗೆಯಾಗಿ ನೀಡಬೇಕಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಹಾಯಕ ಅಧೀಕ್ಷಕ ಸುನಿಲ್‌ಕುಮಾರ ವಿ, ಪ್ರಧಾನ ಅಂಚೆಪಾಲಕ ದೊಡ್ಡಪ್ಪ ಇಟಗಿ, ನಗರ ಅಂಚೆಪಾಲಕ ಮಂಜುನಾಥ ಕುರಿಯವರ, ಉಪ ಅಂಚೆಪಾಲಕ ಡಿ.ಜಿ. ವ್ಯಾಗೇರಿ, ಗದಗ ಶಹರದ ಅಂಚೆ ಇಲಾಖೆ ಸಿಬ್ಬಂದಿಗಳು ಹಾಗೂ ಪೋಸ್ಟ್ ವ್ಯಾನ್‌ಗಳು ಪಾಲ್ಗೊಂಡಿದ್ದರು.

### ಲೋಕಾಯುಕ್ತದಿಂದ ಹಮ್ಮಿಕೊಂಡಿದ್ದ ಜನ ಸಂಪರ್ಕ ಸಭೆಯಲ್ಲಿ ಡಿವೈಎಸ್ಪಿ ವಿಜಯ ಬಿರಾದಾರ

# ಸರ್ಕಾರಿ ಕಾಲೇಜುಗಳ ಉಳಿವಿಗೆ ಶ್ರಮವಹಿಸಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಎಸ್‌ಎಸ್‌ಎಲ್‌ಸಿ ಪೂರ್ಣಗೊಳ್ಳಿಸಿದ ವಿದ್ಯಾರ್ಥಿಗಳಿಗೆ ಹಾಗೂ ಪಾಲಕರಿಗೆ ಖಾಸಗಿ ಶಿಕ್ಷಣ ಸಂಸ್ಥೆಗಳಿಂದ ಸಾಕಷ್ಟು ದೂರವಾಣಿ ಕರೆಗಳು ಬರುತ್ತವೆ. ಇದಕ್ಕೆ ಮನಸೋತು ಪಾಲಕರು ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಆದ್ಯತೆ ನೀಡುತ್ತಿದ್ದಾರೆ. ಇದರಿಂದ ಸರ್ಕಾರಿ ಪದವಿಪೂರ್ವ, ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗುತ್ತಿವೆ. ಮುಂದಿನ ದಿನಮಾನಗಳಲ್ಲಿ ಸರ್ಕಾರಿ ಕಾಲೇಜುಗಳು ಮುಚ್ಚುವ ಹಂತಕ್ಕೆ ತಲುಪಬಹುದು. ಆದ್ದರಿಂದ ಸರ್ಕಾರಿ ನೌಕರರು ಸರ್ಕಾರಿ ಶಾಲೆ-ಕಾಲೇಜುಗಳ ಉಳಿವಿಗೆ ಶ್ರಮ ವಹಿಸುವುದು ಅವಶ್ಯವಾಗಿದೆ ಎಂದು ಗದಗ ಲೋಕಾಯುಕ್ತ ಡಿವೈಎಸ್ಪಿ ವಿಜಯ ಬಿರಾದಾರ ಹೇಳಿದರು.



ಇಲ್ಲಿನ ಪಟ್ಟಣ ಪಂಚಾಯಿತಿ ಸಭಾಭವನದಲ್ಲಿ ಗುರುವಾರ ಕರ್ನಾಟಕ ಲೋಕಾಯುಕ್ತದಿಂದ ಹಮ್ಮಿಕೊಂಡಿದ್ದ ಜನ ಸಂಪರ್ಕ ಸಭೆಯಲ್ಲಿ ಅವರು ಮಾತನಾಡಿದರು.

ಶಾಲಾ-ಕಾಲೇಜು ಪ್ರಾಚಾರ್ಯರು ಮತ್ತು ಸಿಬ್ಬಂದಿಗಳು ಜೊತೆಗೆ ನೌಕರರು ಎಸ್‌ಎಸ್‌ಎಲ್‌ಸಿ ಪೂರೈಸಿದ ಮಕ್ಕಳ ಮಾಹಿತಿಯನ್ನು ಪಡೆದುಕೊಂಡು ಅವರ ಪಾಲಕರಿಗೆ ಸರ್ಕಾರಿ ಕಾಲೇಜಿಗಳಿಗೆ ತಮ್ಮ ಮಕ್ಕಳನ್ನು ಸೇರಿಸುವಂತೆ ಪ್ರೇರೇಪಿಸಬೇಕು. ಪ್ರಾಚಾರ್ಯರ ಹಾಗೂ ಉಪನ್ಯಾಸಕ ಕೆಲಸ ಕೇವಲ ಪಾಠ ಮಾಡುವುದಷ್ಟೇ ಅಲ್ಲ. ಮಕ್ಕಳ ಪ್ರವೇಶದ ಬಗ್ಗೆ ಕೂಡ ಕಾಳಜಿ ವಹಿಸಬೇಕು. ನರೇಗಲ್ಲ ಪಟ್ಟಣದಲ್ಲಿ ಪದವಿಪೂರ್ವ ಹಾಗೂ ಪ್ರಥಮದರ್ಜೆ ಕಾಲೇಜುಗಳಿದ್ದು, ಅದಕ್ಕೆ ಪೂರಕವಾಗಿ ಅನುಭವಿ ಉಪನ್ಯಾಸಕರು ಹಾಗೂ ಉತ್ತಮ ಪರಿಸರ ಲಭ್ಯವಿದೆ. ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇದ್ದಲ್ಲಿ ನೇರವಾಗಿ ಸಂಬಂಧಿಸಿದ ಇಲಾಖೆಗೆ ಅರ್ಜಿ ಬರೆದು ಪಡೆದುಕೊಳ್ಳಬೇಕು ಎಂದರು.

ಸರ್ಕಾರದ ಯಾವುದೇ ಇಲಾಖೆಯ ಅನುದಾನ ಶಾಲಾ-ಕಾಲೇಜು, ಹಾಸ್ಟೆಲ್, ಪಟ್ಟಣ ಪಂಚಾಯಿತಿ, ಹೆಸ್ಕಾಂ, ಪಶು ವೈದ್ಯಕೀಯ, ಆರೋಗ್ಯ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆ ಯಾವುದೇ ಸಾಮಾಗ್ರಿಗಳ ಪೂರೈಕೆ ಅಥವಾ ಕಾಮಗಾರಿ ಕೈಗೊಂಡಲ್ಲಿ ಅವುಗಳನ್ನು ತಾವು ಅಧೀನಕ್ಕೆ ಪಡೆದುಕೊಳ್ಳುವ ಮುಂಚೆ ಅಂದಾಜು ಪ್ರತಿಯಲ್ಲಿ ಇರುವ ಕೆಲಸಗಳು/ಗುಣಮಟ್ಟವನ್ನು ಕಡ್ಡಾಯವಾಗಿ ಪರಿಶೀಲನೆ ಮಾಡಿಕೊಳ್ಳಬೇಕು. ಇತ್ತೀಚಿನ ದಿನಗಳಲ್ಲಿ ಕಳಪೆ ಸಾಮಾಗ್ರಿಗಳ ವಿತರಣೆ ಹೆಚ್ಚಾಗಿದ್ದು, ಸರ್ಕಾರದ ಅನುದಾನವನ್ನು ದುರ್ಬಳಕೆ ಮಾಡಿಕೊಳ್ಳುತ್ತಿರುವ ಬಗ್ಗೆ ಸಾಕಷ್ಟು ದೂರುಗಳು ಬರುತ್ತಿವೆ. ಇಂತಹ ಕಾರ್ಯಕ್ಕೆ ಅಧಿಕಾರಿಗಳು ಕೈಜೋಡಿಸಿದರೆ ಯಾವುದೇ ಮುಲಾಜಿಲ್ಲದೇ ದೂರನ್ನು ದಾಖಲಿಸಿಕೊಂಡು ತನಿಖೆಗೆ ಮುಂದಾಗಬೇಕಾಗುತ್ತದೆ ಎಂದರು.

ಈ ಸಂದರ್ಭದಲ್ಲಿ 7 ದೂರುಗಳನ್ನು ಸ್ವೀಕರಿಸಲಾಯಿತು. ಪ.ಪಂ ಮುಖ್ಯಾಧಿಕಾರಿ ಮಹೇಶ ನಿಡಶೇಶಿ, ತಾ.ಪಂ ಸಹಾಯಕ ನಿರ್ದೇಶಕ ಬಸವರಾಜ ಬಡಿಗೇರ, ಉಪತಹಸೀಲ್ದಾರ ಸಕ್ರಪ್ಪ ದೊಡ್ಡಮನಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

> ಪಟ್ಟಣದಲ್ಲಿ ಸಾರ್ವಜನಿಕರ ಉದ್ದೇಶಕ್ಕಾಗಿರುವ ಉದ್ಯಾನವನವನ್ನು ಪ.ಪಂ ವತಿಯಿಂದ ಶೀಘ್ರದಲ್ಲಿ ಸ್ವಚ್ಛಗೊಳಿಸಿದ ಅನುಕೂಲ ಮಾಡಬೇಕು. ಹೆಸ್ಕಾಂನಿಂದ ದುರಸ್ತಿ ಕಾರ್ಯಕ್ಕೆಂದು ರೈತರಿಂದ ಪಡೆದುಕೊಂಡಿರುವ 4 ಟಿಸಿಗಳ ಬಗ್ಗೆ ಮೂರು ದಿನದಲ್ಲಿ ಮಾಹಿತಿಯನ್ನು ನೀಡಬೇಕು. ಕಳಪೆ ಕಾಮಗಾರಿಗಳ ಬಗ್ಗೆ ಕ್ರಮಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಮುಂದಾಗಬೇಕು. ಅನೈತಿಕ ಚಟುವಟಿಕೆಗಳು ನಡೆಯುವ ಸ್ಥಳಕ್ಕೆ ಹೋಗಿ ಪೊಲೀಸ್ ಸಿಬ್ಬಂದಿಗಳು ದಂಡ ಹಾಕಲು ಮುಂದಾಗಬೇಕು ಎಂದು ಲೋಕಾಯುಕ್ತ ಡಿವೈಎಸ್ಪಿ ವಿಜಯ ಬಿರಾದಾರ ಸೂಚಿಸಿದರು.

## ಉಚಿತ ಸುನ್ನತೆ ಇಬ್ರಾಹಿಂ ಕಾರ್ಯಕ್ರಮ ಯಶಸ್ವಿ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗದಗ-ಬೆಟಗೇರಿ ನೌಜವಾನ ಯಂಗ್ ಕಮಿಟಿ ಹಾಗೂ ಹಿಂದ್ ಎಜ್ಯುಕೇಶನ್ ಅಸಿಸ್ಟೆನ್ಸ್ ಟ್ರಸ್ಟ್ ಸಹಯೋಗದಲ್ಲಿ ಗದಗ ನಗರದಲ್ಲಿ ಪ್ರಥಮ ಬಾರಿಗೆ ಆಯೋಜಿಸಿದ್ದ ಉಚಿತ ಸುನ್ನತೆ ಇಬ್ರಾಹಿಂ (ಖತ್ನಾ) ಕಾರ್ಯಕ್ರಮವನ್ನು ನಗರದ ಕರ್ನಾಟಕ ಭವನದಲ್ಲಿ ಹಮ್ಮಿಕೊಳ್ಳಲಾಗಿತ್ತು. 156 ಮಕ್ಕಳಿಗೆ ಸುನ್ನತೆ ಇಬ್ರಾಹಿಂ (ಖತ್ನಾ) ಯಶಸ್ವಿಯಾಗಿ ನೆರವೇರಿಸಲಾಯಿತು.

ಖಾಸಗಿ ಆಸ್ಪತ್ರೆಗೆಯಲ್ಲಿ ಈ ಸುನ್ನತೆ (ಖತ್ನಾ) ಮಾಡಲು ಒಬ್ಬರಿಗೆ 5-8 ಸಾವಿರ ರೂಪಾಯಿ ಖರ್ಚಾಗುತ್ತಿದ್ದು, ಆದರೆ ನಗರದ ಗದಗ-ಬೆಟಗೇರಿ ನೌಜವಾನ ಯಂಗ್ ಕಮಿಟಿ ಹಾಗೂ ಹಿಂದ್ ಎಜ್ಯುಕೇಶನ್ ಅಸಿಸ್ಟೆನ್ಸ್ ಟ್ರಸ್ಟ್ ಸದಸ್ಯರು 156 ಮಕ್ಕಳಿಗೆ ಸುನ್ನತೆಯನ್ನು ಉಚಿತವಾಗಿ ಮಾಡಿದ್ದಾರೆ. ಡಾ. ಎಂ.ಡಿ. ಸಾಮುದ್ರಿ ನೇತೃತ್ವದಲ್ಲಿ ಹಿರಿಯ ಶಸ್ತ್ರಚಿಕಿತ್ಸಕ ಡಾ. ಯೂನಸ್ ಸೋಲಂಕಿ, ಡಾ. ಶಿವಪುತ್ರ ಬಾಲರೆಡ್ಡಿ, ಡಾ. ವಿಜಯಕುಮಾರ ಹಳ್ಳಿ, ಡಾ. ವಿನೋದ ಮೋರಾಳೇ, ಡಾ. ವಿಕ್ರಮ ಪಾಟೀಲ, ಡಾ. ವಿಕ್ರಾಂತ ಶರ್ಮಾ, ಡಾ. ರಾಜುಕುಮಾರ ವಾಲಿ, ಡಾ. ನಟರಾಜ ಸೇರಿದಂತೆ ನುರಿತ ತಜ್ಞ ವೈದ್ಯರು, ಹೊರ ರಾಜ್ಯದ ವೈದ್ಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಯುವ ನಾಯಕ ಕೃಷ್ಣಗೌಡ ಪಾಟೀಲ, ಮದರ್ ಖಾಜಿ, ದಾದಾಪೀರ, ಎಂ.ಸಿ. ಶೇಖ್, ಬಾಷಾಸಾಬ್ ಮಲ್ಲಸಮುದ್ರ, ಇಕಬಾಲ್ ಹಣಗಿ ಹಾಗೂ ಇತರರು ಹಾಜರಿದ್ದರು.

## ನರೇಗಾ ಕಾರ್ಮಿಕರು ಆರೋಗ್ಯದ ಮಹತ್ವ ಅರಿಯಿರಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ತಾಲೂಕಿನ ಸೂರಣಗಿ ಗ್ರಾಮದಲ್ಲಿ ನರೇಗಾ ಕೂಲಿ ಕಾರ್ಮಿಕರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಸಲಾಯಿತು.

ಪಿಡಿಒ ಜಿ.ಎಂ. ರೋಣದ ಮಾತನಾಡಿ, ಆರೋಗ್ಯ ಸಂಪತ್ತು ಎಲ್ಲಕ್ಕಿಂತ ದೊಡ್ಡದು. ಗ್ರಾಮದ ನರೇಗಾ ಕೂಲಿಕಾರರು ಆರೋಗ್ಯದ ಮಹತ್ವವನ್ನು ಅರಿತುಕೊಂಡು ಕೆಲಸದಲ್ಲಿ ತೊಡಗಬೇಕು. ಕೂಲಿ ಕಾರ್ಮಿಕರು ತಾವು ಮಾಡಿದ ಕೆಲಸದ ಸರಿಯಾದ ಅಳತೆಯ ಪ್ರಮಾಣ ದಾಖಲಿಸಿ ನರೇಗಾದ ಸದುಪಯೋಗ ಪಡೆದುಕೊಳ್ಳಬೇಕು. ನರೇಗಾ ಯೋಜನೆಯಲ್ಲಿ ಕೂಲಿಯ ಮೊತ್ತ ಹೆಚ್ಚಳವಾಗಿದ್ದು, ವೈಯಕ್ತಿಕ ಕಾಮಗಾರಿಗಳಿಗೆ ನಮೂನೆ 6 ಅರ್ಜಿ ನೀಡಬೇಕು. ಕೂಲಿಯ ಮೊತ್ತ 370 ರೂಪಾಯಿಗಳಿಗೆ ಏರಿಕೆಯಾಗಿದೆ. ಕಾಯಕ ಬಂಧುಗಳು ಎನ್‌ಎಂಎಂಎಸ್ ಆ್ಯಪ್ ಹಾಜರಾತಿ ನಿರ್ವಹಣೆ ಮಾಡುತ್ತಿದ್ದು, ಅವರೊಂದಿಗೆ ಸಹಯೋಗದೊಂದಿಗೆ ಕೆಲಸ ಮಾಡಬೇಕೆಂದು ತಿಳಿಸಿದರು.


ವೈದ್ಯಧಿಕಾರಿಗಳಾದ ಡಾ. ಮರಿಗೌಡರ್ ಆರೋಗ್ಯ ಕಾಪಾಡಿಕೊಳ್ಳುವ ಕುರಿತು ಸಲಹೆ-ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷ ಶಂಕ್ರಪ್ಪ ಶಿರನಹಳ್ಳಿ, ಆರೋಗ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು, ಬಿಎಫ್‌ಟಿ ಕೆ.ಎ ನದಾಫ್, ಗ್ರಾ.ಪಂ ಸಿಬ್ಬಂದಿ, ಕಾಯಕ ಬಂಧುಗಳು, ನರೇಗಾ ಕೂಲಿ ಕಾರ್ಮಿಕರು ಹಾಜರಿದ್ದರು.

### ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಎಚ್ಚರಿಕೆ

## ಯತ್ನಾಳರು ಮಿತಿಮೀರಿ ವರ್ತಿಸಬಾರದು

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ರಾಜಕಾರಣದಲ್ಲಿ ಬಸನಗೌಡ ಪಾಟೀಲ್ ಯತ್ನಾಳ್ ಉಚ್ಚಾಟಿತರಾದ ಮೇಲೆ ಮಾನಸಿಕ ಖಿನ್ನತೆಗೆ ಒಳಗಾಗಿ ತಮ್ಮ ಅಸ್ತಿತ್ವವನ್ನು ಉಳಿಸಿಕೊಳ್ಳಲು ಬಾಯಿಗೆ ಬಂದಂತೆ ಮಾತನಾಡುವುದನ್ನು ನಿಲ್ಲಿಸಬೇಕೆಂದು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ರಾಜ್ಯಾಧ್ಯಕ್ಷ ಮಹ್ಮದಶಫಿ ಎಸ್.ನಾಗರಕಟ್ಟಿ ಹೇಳಿದರು.



ಮಹಾಸಭಾದ ಕಚೇರಿಯಲ್ಲಿ ನಡೆದ ಖಂಡನಾ ಸಭೆಯಲ್ಲಿ ಮಾತನಾಡಿದ ಅವರು, ಬಸನಗೌಡ ಪಾಟೀಲ್ ಯತ್ನಾಳರು ಮುಸ್ಲಿಂ ಸಮುದಾಯದ ಮೇಲೆ ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತಾ ಮುಸ್ಲಿಂ ಸಮುದಾಯದ ವಿರುದ್ಧ ಅವಹೇಳಿನಕಾರಿ ಹೇಳಿಕೆ ನೀಡುತ್ತಿರುವುದನ್ನು ನಿಲ್ಲಿಸಬೇಕು. ಮುಸ್ಲಿಂ ಸಮುದಾಯದಲ್ಲಿ ಪ್ರವಾದಿಗಳು ಅತ್ಯಂತ ಗೌರವ ಸ್ಥಾನ ಹೊಂದಿದ್ದಾರೆ. ಅವರ ಅವಹೇಳನವನ್ನು ಸಮುದಾಯ ಸಹಿಸುವುದಿಲ್ಲ.

ಸಮುದಾಯ ಅವರ ವಿರುದ್ಧ ಪ್ರತಿಭಟನೆ ನಡೆಸುತ್ತದೆ. ಕರ್ನಾಟಕವು ಬಸವಾದಿ ಶರಣರು, ಸಂತರು ನಡೆದಾಡಿದ ಭೂಮಿಯಾಗಿದೆ.

ಇಲ್ಲಿ ಎಲ್ಲರೂ ಕೋಮು ಸೌಹಾರ್ದತೆಯಿಂದ ಬದುಕುತ್ತಿದ್ದಾರೆ. ಅಲ್ಲದೆ, ವಿಜಯಪುರ ಬಸವಣ್ಣನವರ ತವರಾಗಿದೆ. ಅಂತಹ ಜಿಲ್ಲೆಯಲ್ಲಿ ಜಾತಿ-ಜಾತಿಗಳ ನಡುವೆ ವಿಷ ಬೀಜ ಬಿತ್ತುವ ಕಾರ್ಯವನ್ನು ಯತ್ನಾಳ ಮಾಡುತ್ತಿದ್ದಾರೆ. ಅವರೊಬ್ಬ ಜನಪ್ರತಿನಿಧಿ ಎಂಬುದನ್ನು ಮರೆಯಬಾರದು ಎಂದು ಎಚ್ಚರಿಕೆಯನ್ನು ನೀಡಿದರು.

ಈ ಸಂದರ್ಭದಲ್ಲಿ ಧಾರವಾಡ ಜಿಲ್ಲೆ ಹಾಗೂ ಗದಗ ಜಿಲ್ಲೆಯ ಉಸ್ತುವಾರಿಗಳು, ಗದಗ ಜಿಲ್ಲಾಧ್ಯಕ್ಷ ಜಾಫರ ಡಾಲಾಯತ, ರಹೀಂಸಾಬ ದೊಡ್ಡಮನಿ, ಮುನ್ನಾ ಕಲ್ಮನಿ, ಇರ್ಫಾನ್ ನದಾಫ್, ಇಬ್ರಾಹಿಂ ಮುಲ್ಲಾ, ಅನಿಸ್ ಬಾಗವಾನ್, ಯಾಸಿನ್ ಮುಲ್ಲಾ, ಯೂನಿಸ್ ಮುಲ್ಲಾದರವೇಸ್, ಅಫ್ಜಲ್ ಮನಿಯಾರ, ಯಾಸಿನ್ ಖವಾಸ್ ಮುಂತಾದ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ರಾಷ್ಟ್ರ ಮಟ್ಟದ ಪ್ರಾಜೆಕ್ಟ್ ಸ್ಪರ್ಧೆಯಲ್ಲಿ ಬಹುಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಮಹಾರಾಷ್ಟ್ರದ ಸೋಲ್ಹಾಪುರದಲ್ಲಿ ಜರುಗಿದ ರಾಷ್ಟ್ರಮಟ್ಟದ ಪ್ರಾಜೆಕ್ಟ್ ಪಾಲಿಟೆಕ್ನಿಕ್ WISOTECH -25ರಲ್ಲಿ ರೂರಲ್ ಪಾಲಿಟೆಕ್ನಿಕ್‌ನ ಇಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ವಿಭಾಗದ ಅಂತಿಮ ವರ್ಷದ ಡಿಪ್ಲೋಮಾ ವಿದ್ಯಾರ್ಥಿಗಳು ವಿನ್ಯಾಸಗೊಳಿಸಿದ `IOT Based Vehicle Speed Introduction System Using RFID Technology' ಪ್ರಾಜೆಕ್ಟ್‌ಗೆ ಪ್ರಥಮ ಸ್ಥಾನ ದೊರೆತಿದೆ.

ವಿಭಾಗದ ಮುಖ್ಯಸ್ಥ ಟಿ.ಜಿ. ಕಾಟೇವಾಲ್ ಅವರ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳಾದ ಬಸವರಾಜ ಪಾಮರಡ್ಡಿ ರಾಜು ಅಂಕಲಿ, ನಜೀರಹಮ್ಮದ ಅಡ್ವಾನಿ, ಮುತ್ತಪ್ಪ ಬಾರಕೇರ, ಅಭಯ ಭೀರಸಾಲ ಹಾಗೂ ದೇವಮ್ಮ ಕರ್ಲವಾಡ ಮಾದರಿಯನ್ನು ಸಿದ್ಧಪಡಿಸಿದ್ದರು.

ವಿದ್ಯಾರ್ಥಿಗಳಾದ ಮಲ್ಲಯ್ಯ ಹರ್ಲಾಪುರ, ರೇಣುಕಾ ಗಡಿಯಪ್ಪನವರ, ನಿರ್ಮಲಾ ಶಿವಳ್ಳಿ, ಕಳಕಪ್ಪಾ ಮೇಟಿ, ವಿಜಯಕುಮಾರ ರೋಣದ ಹಾಗೂ ಇರ್ಫಾನ ಕಳ್ಳಿಮನಿ ವಿನ್ಯಾಸಗೊಳಿಸಿದ `IOT Bssed Smart Shoping Trolley' ಪ್ರಾಜೆಕ್ಟ್‌ಗೆ ದ್ವಿತೀಯ ಸ್ಥಾನ ದೊರೆತಿದೆ.

ಸ್ಪರ್ಧೆಯಲ್ಲಿ ವಿವಿಧ ರಾಜ್ಯಗಳಿಂದ ಸುಮಾರು 100ಕ್ಕೂ ಹೆಚ್ಚು ಪಾಲಿಟೆಕ್ನಿಕ್ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಆರ್.ಟಿ.ಇ ಸೊಸೈಟಿಯ ಕಾರ್ಯದರ್ಶಿ ಸಚಿನ್ ಡಿ.ಪಾಟೀಲ, ಆಡಳಿತ ಮಂಡಳಿಯ ಸದಸ್ಯರು, ಪ್ರಾಚಾರ್ಯರಾದ ಕೆ.ಎಚ್. ಓದುಗೌಡರ, ಪಾಲಿಟೆಕ್ನಿಕ್ ಇ&ಸಿ ವಿಭಾಗದ ಸಿಬ್ಬಂದಿಗಳಾದ ಆರ್.ಎಮ್. ಡಂಬಳ, ಜಿ.ಎನ್. ಸೊಲ್ಲಾಪುರ, ಜೆ.ಬಿ. ಬ್ಯಾಳಿ, ಈಶ್ರತ್ ಮುಲ್ಲಾ ಸೇರಿದಂತೆ ಕಾಲೇಜಿನ ಎಲ್ಲ ಉಪನ್ಯಾಸಕರು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಸಾಧನೆಗೈದ ಎಲ್ಲ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದ್ದಾರೆ.

### ಹಾಲಕೆರೆ ಕೃಷಿ ಪತ್ತಿನ ಸಹಕಾರ ಸಂಘ

# ಅಧ್ಯಕ್ಷರಾಗಿ ಅಂದಾನಗೌಡ ಪಾಟೀಲ ಪುನರಾಯ್ಕೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಹಾಲಕೆರೆ ಗ್ರಾಮದ ಕೃಷಿ ಪತ್ತಿನ ಸಹಕಾರಿ ಸಂಘಕ್ಕೆ ಅಂದಾನಗೌಡ ಚನ್ನವೀರಗೌಡ ಪಾಟೀಲ ಸತತ 5ನೇ ಬಾರಿಗೆ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು.



ಸಂಘದ ಕಚೇರಿಯಲ್ಲಿ ಈಚೆಗೆ ನಡೆದ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ ಚುನಾವಣೆಯಲ್ಲಿ ಉಪಾಧ್ಯಕ್ಷರಾಗಿ ಮಲ್ಲಪ್ಪ ಸಣ್ಣಅಂದಾನಪ್ಪ ಪ್ರಭಣ್ಣವರ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು. ಸಹಕಾರ ಅಭಿವೃದ್ಧಿ ಅಧಿಕಾರಿ ಪ್ರಶಾಂತ ಮುಧೋಳ ಚುನಾವಣಾಧಿಕಾರಿಯಾಗಿ ಕಾರ್ಯ ನಿರ್ವಹಿಸಿ, ಈ ಘೋಷಣೆಯನ್ನು ಮಾಡಿದರು.


ಈ ಸಂದರ್ಭದಲ್ಲಿ ಮಾತನಾಡಿದ ಅಧ್ಯಕ್ಷ ಅಂದಾನಗೌಡ ಪಾಟೀಲ, ನಷ್ಟದ ಅಂಚಿನಲ್ಲಿದ್ದ ಈ ಸಂಘವನ್ನು ಕಳೆದ ನಾಲ್ಕು ಅವಧಿಯಲ್ಲಿ ಎಲ್ಲ ನಿರ್ದೇಶಕರ ಸಹಕಾರದೊಂದಿಗೆ ಲಾಭದಾಯಕ ಸಂಘವನ್ನಾಗಿ ಮಾಡಿದ್ದೇನೆ. ಸಂಘದ ಶತಮಾನೋತ್ಸವದ ಸಂದರ್ಭದಲ್ಲಿ ಸಂಘಕ್ಕೆ ನೂತನ ಕಟ್ಟಡವನ್ನು ಸಹ ನಿರ್ಮಿಸಲಾಗಿದೆ. ಕಳೆದ ಅವಧಿಯಲ್ಲಿ ಸಂಘವು ಎರಡು ಕೋಟಿ ರೂ. ಸಾಲ ನೀಡಿದೆ. ಈಗ ನಬಾರ್ಡ್‌ನಿಂದ ಬರಬೇಕಾದ ಅನುದಾನ ಕಡಿಮೆಯಾಗಿರುವದರಿಂದ ಸಾಲ ನೀಡುವುದು ಕಡಿಮೆಯಾಗಬಹುದು. ಮತ್ತೆ ಮೊದಲಿನ ಸ್ಥಿತಿಗೆ ಬಂದರೆ ರೈತರಿಗೆ ಸಾಕಷ್ಟು ಅನುಕೂಲತೆಗಳನ್ನು ಮಾಡಿಕೊಡಲಾಗುವುದೆಂದರು.

ಚುನಾವಣೆಯಲ್ಲಿ ಅಂದಾನಗೌಡ ಪಾಟೀಲ ಅಧ್ಯಕ್ಷ (ಸಾಲಗಾರರ ಸಾಮಾನ್ಯ), ಮಲ್ಲಪ್ಪ ಸಣ್ಣಅಂದಾನಪ್ಪ ಪ್ರಭಣ್ಣವರ ಉಪಾಧ್ಯಕ್ಷ (ಸಾಲಗಾರರ ಹಿಂದುಳಿದ ವರ್ಗ ಅ), ಮಲ್ಲಪ್ಪ ಲಕ್ಷ್ಮಪ್ಪ ಕಳ್ಳಿಗುಡ್ಡ (ಸಾಲಗಾರರ ಸಾಮಾನ್ಯ), ಅಂದಪ್ಪ ಭೀಮಪ್ಪ ಹೊಕ್ಕಳದ (ಸಾಲಗಾರರ ಸಾಮಾನ್ಯ), ಶಿದ್ದಪ್ಪ ಬಾಳಪ್ಪ ಗೆದಗೇರಿ (ಸಾಲಗಾರರ ಸಾಮಾನ್ಯ), ಅಂದಾನಗೌಡ ಮುದಕನಗೌಡ ಪಾಟೀಲ (ಸಾಲಗಾರರ ಸಾಮಾನ್ಯ), ಶೈಲಜಾ ತಿಮ್ಮನಗೌಡ ಮುಲ್ಕಿಪಾಟೀಲ (ಸಾಲಗಾರರ ಮಹಿಳಾ), ಶಾಂತಮ್ಮ ರುದ್ರಪ್ಪ ತೋಟದ (ಸಾಲಗಾರರ ಮಹಿಳಾ), ಬಸವರಾಜ ರಾಚಪ್ಪ ಬಳ್ಳಾರಿ (ಸಾಲಗಾರರ ಹಿಂದುಳಿದ ವರ್ಗ ಬ), ಬಸಪ್ಪ ಹನಮಪ್ಪ ಮೂಲಿಮನಿ (ಸಾಲಗಾರರ ಪರಿಶಿಷ್ಟ ಜಾತಿ), ಹನಮಪ್ಪ ಬಾಳಪ್ಪ ತೊಂಡಿಹಾಳ (ಸಾಲಗಾರರ ಪರಿಶಿಷ್ಟ ಪಂಗಡ), ಕಲ್ಲಪ್ಪ ರಾಮಪ್ಪ ಮಡಿವಾಳರ (ಬಿನ್ ಸಾಲಗಾರರ) ಆಯ್ಕೆಯಾದರು.

## ಓವರ್‌ಲೋಡ್ ಟಿಪ್ಪರ್‌ಗಳಿಂದ ರಸ್ತೆ ಹಾಳು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿರಹಟ್ಟಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬಹುತೇಕ ರಸ್ತೆಗಳು ಹಾಳಾಗಲು ಕಲ್ಲು, ಮರಳು, ಎಂಸ್ಯಾಂಡ್‌ಗಳನ್ನು ಮಿತಿಮೀರಿ ತುಂಬಿಕೊಂಡು ಓಡಾಡುವ ಲಾರಿ, ಟಿಪ್ಪರ್‌ಗಳೇ ಕಾರಣ. ಓವರ್‌ಲೋಡ್ ತುಂಬಿಕೊಂಡು ಸಾಗುತ್ತಿರುವ ವಾಹನಗಳನ್ನು ಗಮನಿಸದೆ ಇರುವ ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಇವರೊಂದಿಗೆ ಶಾಮೀಲಾಗಿದ್ದಾರೆ ಎನ್ನುವ ಸಂಶಯ ಬರುವಂತಾಗಿದೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಆರೋಪಿಸಿದರು.



ಅವರು ಈ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿ, ನಿತ್ಯ ನೂರಾರು ವಾಹನಗಳು ಕ್ರಷರ್ ಮೂಲಕ ಪ್ರಮುಖ ರಸ್ತೆಗಳಲ್ಲಿ ಓವರ್ ಲೋಡ್ ತುಂಬಿಕೊಂಡು ಹೋಗುತ್ತಿರುವದು ಅಧಿಕಾರಿಗಳಿಗೆ ಕಾಣುತ್ತಿಲ್ಲವೇ ಎಂದು ಪ್ರಶ್ನಿಸಿದ ಅವರು, 14-15 ಟನ್ ತುಂಬಿರುವುದಾಗಿ ಹೇಳುವ ಚಾಲಕರು ಕನಿಷ್ಠ 20-25 ಟನ್ ತುಂಬಿರುತ್ತಾರೆ ಎಂದು ಆರೋಪಿಸಿದರು.

ಹೀಗೆ ಸರಕಾರಕ್ಕೂ ಮೋಸ ಮಾಡುತ್ತಿದ್ದು, ಸಾಕಷ್ಟು ಪ್ರಮಾಣದಲ್ಲಿ ರಾಜಸ್ವ ನಷ್ಟವಾಗುತ್ತಿದೆ.

ಜೊತೆಗೆ ಸಂಪೂರ್ಣ ರಸ್ತೆಗಳನ್ನು ಹಾಳು ಮಾಡುತ್ತಿದ್ದಾರೆ. ಇದನ್ನು ಕೂಡಲೇ ನಿಲ್ಲಿಸಬೇಕು. ಕ್ರಷರ್ ಮಾಲೀಕರು, ಲಾರಿ, ಟಿಪ್ಪರ್‌ಗಳ ಮಾಲೀಕರು ಸ್ವಯಂಪ್ರೇರಿತರಾಗಿ ಓವರ್ ಲೋಡ್ ಹಾಕುವದನ್ನು ನಿಲ್ಲಿಸಲಿ.

ಇಲ್ಲದಿದ್ದಲ್ಲಿ ತಹಸೀಲ್ದಾರ ಹಾಗೂ ಗದಗ ಉಪವಿಭಾಗಾಧಿಕಾರಿಗಳೊಂದಿಗೆ ಮಾತನಾಡಿ ತಾಲೂಕಿನಾದ್ಯಂತ ಆರ್‌ಟಿಒ, ಪೋಲೀಸ್, ಕಂದಾಯ ಇಲಾಖೆಗಳಿಂದ ಅಲ್ಲಲ್ಲಿ ಚೆಕ್‌ಪೋಸ್ಟ್ ಮಾಡುವ ವ್ಯವಸ್ಥೆ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

## ಜಾತ್ರೆಯಲ್ಲಿ ಗನ್ ಹಿಡಿದ ಸಿಟಿ ರವಿ: ಫೋಟೋ ವೈರಲ್

■ ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು

ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಅವರು ಜಾತ್ರೆಯೊಂದರಲ್ಲಿ ಗನ್ ಹಿಡಿದು ಗುರಿ ಇಟ್ಟಿದ್ದಾರೆ. ಈ ಫೋಟೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಹೌದು, ಜಿಲ್ಲೆಯ ಚಿಕ್ಕಮಾಗರವಳ್ಳಿಯಲ್ಲಿ ನಡೆಯುವ ಸುಗ್ಗಿ ಹಬ್ಬದ ಜಾತ್ರಾ ಮಹೋತ್ಸವದಲ್ಲಿ ಸಿಟಿ ರವಿ ಭಾಗಿಯಾಗಿದ್ದರು.

ಕಳೆದ 15 ದಿನಗಳಿಂದ ಚಿಕ್ಕಮಾಗರವಳ್ಳಿಯಲ್ಲಿ ಸುಪ್ರಸಿದ್ಧ ಸುಗ್ಗಿ ಹಬ್ಬದ ಜಾತ್ರಾ ಮಹೋತ್ಸವ ನಡೆಯುತ್ತಿದ್ದು, ಕಳೆದೊಂದು ವಾರದಿಂದಲೂ ಸಿ.ಟಿ.ರವಿ ಅವರು ಜಾತ್ರೆಯಲ್ಲಿ ಪಾಲ್ಗೊಂಡಿದ್ದರು.

ಗುರುವಾರ ಜಾತ್ರೆಯ ಕೊನೆಯ ದಿನವಾಗಿರುವುದರಿಂದ ಗನ್ ಹಿಡಿದು ತೆಂಗಿನಕಾಯಿಗೆ ಗುರಿ ಇಟ್ಟು ಅಂಬು ಹೊಡೆದು, ಗ್ರಾಮಸ್ಥರ ಜೊತೆ ಕೋಲಾಟಕ್ಕೆ ಹೆಜ್ಜೆ ಹಾಕಿದರು.

ಸಿ.ಟಿ ರವಿ ಜೊತೆ ಗ್ರಾಮದ ಯುವಕರು, ಬಿಜೆಪಿ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಕುಣಿದು ಕುಪ್ಪಳಿಸಿದರು.

ಸಾಮಾನ್ಯವಾಗಿ 15 ದಿನಗಳ ಕಾಲ ನಡೆಯುವ ಸುಗ್ಗಿ ಹಬ್ಬವನ್ನು ಮಲೆನಾಡಿಗರು ಅತ್ಯಂತ ಭಯ ಹಾಗೂ ಶ್ರದ್ಧಾಭಕ್ತಿಯಿಂದ ಆಚರಿಸುತ್ತಾರೆ.

ಈ ಸಮಯದಲ್ಲಿ ಹತ್ತಾರು ಹಳ್ಳಿಯ ಜನರು ಮಾಂಸ-ಮದ್ಯ ಸೇವಿಸದೆ, ಕಾಲಿಗೆ ಚಪ್ಪಲಿ ಹಾಕದೆಯೂ ಸುಗ್ಗಿ ಹಬ್ಬ ಆಚರಿಸುತ್ತಾರೆ. ಹಿಂದಿನ ಕಾಲದಲ್ಲಿ ಸುಗ್ಗಿ ಹಬ್ಬದ ವೇಳೆ ಬೇರೆ ಊರಿನವರು ಈ ಊರಿನ ಒಳಗೂ ಹೋಗುತ್ತಿರಲಿಲ್ಲ ಎನ್ನಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka